ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYA PRAGATHI Kannada daily

ಡಿಜಿಟಲ್ ನ್ಯೂಸ್ ಕಹಾನಿ

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 ಸಂಪುಟ: 05 | Issue: 190 ಸಂಚಿಕೆ: 190 | Date: 19-08-2026 Wednesday | RNI NO: KARKAN/2021/80805 | L2/RNP-1285/TMR/2025-27 | Page: 4 ಪುಟ: 4 | Price: 1.00 ಬೆಲೆ: 1.00 ರೂ

ನಾಳೆ ಸುದ್ದಿ

ತುಮಕೂರಿನ ಜಿಲ್ಲಾಸ್ಪತ್ರೆಗೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಸಂತೋಷ್‌ಕುಮಾರ್ ಭೇಟಿ ನೀಡಿ ಪರಿಶೀಲಿಸಿ ರೋಗಿಗಳು ಹಾಗೂ ಮಕ್ಕಳ ಆರೋಗ್ಯ ವಿಚಾರಿಸಿದರು. ಡಾ. ಸಿದ್ದರಾಮಣ್ಣ, ಡಿಹೆಚ್‌ಓ ಡಾ. ಚಂದ್ರಶೇಖರ್, ಡಾ. ಆಸ್ಟರ್ ಬೇಗ್, ಮಕ್ಕಳ ರಕ್ಷಣಾಧಿಕಾರಿ ಪವಿತ್ರ ಮತ್ತಿತರರು ಚಿತ್ರದಲ್ಲಿದ್ದಾರೆ.

ತುಮಕೂರಿನ ರೈಲ್ವೆ ನಿಲ್ದಾಣದ ರಸ್ತೆಯಲ್ಲಿರುವ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಸಂತೋಷ್‌ಕುಮಾರ್ ಭೇಟಿ ನೀಡಿ ಪರಿಶೀಲಿಸಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಡಾ. ಸಿದ್ದರಾಮಣ್ಣ, ರಂಗಸ್ವಾಮಿ ಮತ್ತಿತರರು ಚಿತ್ರದಲ್ಲಿದ್ದಾರೆ.

ಗೊರವನಹಳ್ಳಿ ಶ್ರೀ ಮಹಾಲಕ್ಷ್ಮಿ ದೇವಾಲಯದಲ್ಲಿ ವಿಶೇಷ ಪೂಜೆ

ತುಮಕೂರು: ಜಿಲ್ಲೆಯ ಕೊರಟಗೆರೆ ತಾಲ್ಲೂಕು ಗೊರವನಹಳ್ಳಿಶ್ರೀ ಮಹಾಲಕ್ಷ್ಮಿ ದೇವಾಲಯದಲ್ಲಿ ಶಾಸನ ಮಾಸದ 2ನೇ ಶುಕ್ರವಾರ ಆಗಸ್ಟ್ 21ರಂದು ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ಶ್ರೀ ಮಹಾಲಕ್ಷ್ಮಿ ಅಮ್ಮನವರಿಗೆ ವಿಶೇಷ ಹೂವಿನ ಅಲಂಕಾರ, ಹಣ್ಣಾಮೃತ ಅಭಿಷೇಕ, ಮಹಾ ಮಂಗಳಾರತಿ ನೇರವೇರಿಸಿ ವಿಶೇಷ ಪೂಜಾ ಸೇವೆಗಳು ಜರುಗಲಿವೆ.

ವಿಶೇಷ ಪೂಜಾ ಕಾರ್ಯಕ್ರಮದ ಪ್ರಯುಕ್ತ ಮಹಾ ಮಂಗಳಾರತಿ ನಂತರ ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ, ಉಡಿಯನ್ನ ನೀಡಿ ವ್ಯವಸ್ಥೆ ಸರತಿ ಸಾಲಿನಲ್ಲಿ ಅಮ್ಮನವರ ದರ್ಶನ ವ್ಯವಸ್ಥೆ ಮಾಡಲಾಗುವುದು. ಅಲ್ಲದೆ, ದಾಸೋಹ ನಿಲಯದಲ್ಲಿ ಬೆಳಿಗ್ಗೆ 7 ರಿಂದ ರಾತ್ರಿ 10 ಗಂಟೆಯವರೆಗೆ ನಿರಂತರವಾಗಿ ತಿಂಡಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಲಾಗಿದೆ. ಮಹಿಳಾ ಭಕ್ತಾದಿಗಳಿಗೆ ಮಾಷೆ ಕಮಲಮ್ಮ ಧ್ಯಾನಮಂದಿರದಲ್ಲಿ ಅರಿಶಿನ-ಕುಂಕುಮ, ಹಸಿರು ಬಳೆ ವಿತರಿಸಲಾಗುವುದು. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನದ ಕಾರ್ಯನಿರ್ವಹಣಾ ಅಧಿಕಾರಿ ಮನವಿ ಮಾಡಿದ್ದಾರೆ.

ಚಾಮರಾಜನಗರ ಶೂಟೌಟ್ ಪ್ರಕರಣ

ರಾಜ್ಯ ಸರ್ಕಾರಕ್ಕಿಂತ ಅಧಿಕ ಹಣ ಘೋಷಣೆ ಮಾಡಿದೆ ತಮಿಳುನಾಡು ಸರ್ಕಾರ

ಸೂರ್ಯಪ್ರಗತಿನ್ಯೂಸ್.ಕಾಂ

ಚಾಮರಾಜನಗರದ ಶೂಟೌಟ್ ಪ್ರಕರಣ ಇಡೀ ರಾಜ್ಯಾದ್ಯಂತ ಭಾರೀ ಸದ್ದುಮಾಡಿತ್ತು. ಅಲ್ಲದೇ ತಮಿಳುನಾಡಿನಲ್ಲೂ ಈ ಬಗ್ಗೆ ವಿರೋಧ ಕೇಳಿ ಬಂದಿತ್ತು. ಸ್ವಾತಂತ್ರ್ಯ ದಿನದಂದೇ ತಮಿಳರ ಕೊಲೆ ಆಗಿರುವುದು ಭೂದಯ ವಿದ್ರಾವಕ ಘಟನೆ. ಕರ್ನಾಟಕ ಅರಣ್ಯ ಇಲಾಖೆ ಕೊಟ್ಟಿರುವ ವಿವರಣೆ ಸ್ವೀಕಾರಾರ್ಹ ಆಗಿಲ್ಲ ಎಂದು ಸ್ವತಹ ಸಿಎಂ ವಿಜಯ್ ಅವರೇ ಪೋಸ್ಟ್‌ನಲ್ಲಿ ತಿಳಿಸಿದ್ದರು. ಗಡಿಯಲ್ಲಿ ಚಿಲ್ಲರೆಯಲ್ಲಿ ನಡೆದಿರುವ ಘಟನೆ ಎರಡು ರಾಜ್ಯಗಳಲ್ಲೂ ಸಂಚಲನ ಮೂಡಿಸಿತ್ತು ಮೂವರು ಮೃತರ ಕುಟುಂಬಸ್ಥರಿಗೆ ಈಗಾಗಲೇ ರಾಜ್ಯ ಸರ್ಕಾರ ಪರಿಹಾರ ಘೋಷಣೆ ಮಾಡಿ ನೀಡಿದೆ. ಆದರೆ ರಾಜ್ಯ ಸರ್ಕಾರಕ್ಕಿಂತ ತಮಿಳುನಾಡು ಸರ್ಕಾರ ತುಸು ಅಧಿಕ ಹಣ ಘೋಷಣೆ ಮಾಡಿದೆ

ಚಾಮರಾಜನಗರದಲ್ಲಿ ನಡೆದ ಮೂವರ ಶೂಟೌಟ್ ಪ್ರಕರಣ ನೆರೆಯ ತಮಿಳುನಾಡು ಸರ್ಕಾರದ ಸದನದಲ್ಲೂ ಭಾರೀ ಸದ್ದು ಮಾಡುತ್ತಿದೆ. ವಿರೋಧ ಪಕ್ಷಗಳು ಭಾರೀ ವಿರೋಧ ವ್ಯಕ್ತಪಡಿಸಿದ ಬೆನ್ನಲ್ಲೇ ಸಿಎಂ ಜೋಸೆಫ್ ವಿಜಯ್ ನೇತೃತ್ವದ ಸರ್ಕಾರ ಮೃತಕುಟುಂಬಗಳಿಗೆ ತಲಾ 10 ಲಕ್ಷ ಪರಿಹಾರವನ್ನು ಘೋಷಣೆ ಮಾಡಿದೆ. ಮೂವರ ಶೂಟೌಟ್ ಕೇಸ್ ತಮಿಳುನಾಡು ಸದನದಲ್ಲೂ ಚರ್ಚೆ ಆಗಿದೆ. ವಿರೋಧ ಪಕ್ಷಗಳಾದ ಡಿಎಂಕೆ ಮತ್ತು ಎಐಡಿಎಂಕೆ ಮುಖಂಡರು ಸದನದಲ್ಲಿ ಕೇಸ್ ಕುರಿತು ಪ್ರಸ್ತಾಪ ಮಾಡಿದ್ದಾರೆ. ಇದೇ ವೇಳೆ ಅರಣ್ಯ ಸಚಿವ ರಂಜಿತ್ ಕುಮಾರ್ ಅವರು ಮೃತ ಕುಟುಂಬಗಳಿಗೆ ತಲಾ 10 ಲಕ್ಷ ರೂಪಾಯಿಗಳ ಪರಿಹಾರ ನೀಡುವುದಾಗಿ ಸದನದಲ್ಲಿ ಘೋಷಿಸಿದರು. ಇಂಥಹ ಕೂರ ಘಟನೆಗಳು ಮತ್ತೆ ಸಂಭವಿಸದಂತೆ ನೋಡಿಕೊಳ್ಳಬೇಕು ಎಂದು ನಾನು ಕರ್ನಾಟಕ ಸರ್ಕಾರವನ್ನು ಬಲವಾಗಿ ಒತ್ತಾಯಿಸುತ್ತೇನೆ ಎಂದು ಸಿಎಂ ಜೋಸೆಫ್ ವಿಜಯ್ ಅವರು ಟ್ವಿಟ್ಟರ್‌ನಲ್ಲಿ ಹೇಳಿದ್ದರು.

ಗಡಿ ಜಿಲ್ಲೆಯಾಗಿರುವ ಚಾಮರಾಜನಗರದ ಹೂರು ತಾಲೂಕಿನ ಕಾವೇರಿ ವನ್ಯಜೀವಿಧಾಮ ಶಾಖೆ ಸುಪರ್ದಿಯ ಮರಿಯಾಂಗಲ ಬೀಟ್‌ನಲ್ಲಿ ಆಗಸ್ಟ್ ಸ್ವಾತಂತ್ರ್ಯ ದಿನದಿಂದು ನಡೆದ ಶೂಟೌಟ್ ಪ್ರಕರಣದಲ್ಲಿ ಮೂವರು ಮೃತಪಟ್ಟಿದ್ದರು. ತಮಿಳರಾದ ಅಂಥೋಣಿ ಸಾಮಿ, ಕುಮಾರ್ ಮತ್ತು ಜಾನ್ ರೋಸ್ ಸಾವನ್ನಪ್ಪಿದ್ದರು. ಕುಟುಂಬಸ್ಥರು ಅರಣ್ಯ ಇಲಾಖೆಯ ಮೇಲೆ ಗಂಭೀರವಾದ ಆರೋಪಗಳನ್ನು ಮಾಡುತ್ತಿದ್ದಾರೆ. ಇದರ ಬೆನ್ನಲ್ಲೇ ಕರ್ನಾಟಕ ಸರ್ಕಾರ ಮೃತರ ಕುಟುಂಬಗಳಿಗೆ ತಲಾ 5 ಲಕ್ಷ ರೂಪಾಯಿಗಳನ್ನು ನೀಡಿದರೆ, ತಾಸಕ ಎಂಆರ್ ಮಂಜುನಾಥ್ ಅವರು ತಲಾ 10 ಲಕ್ಷ ರೂಪಾಯಿಗಳನ್ನು ನೆರವನ್ನು ಕುಟುಂಬಸ್ಥರಿಗೆ ಹಸ್ತಾಂತ ಮಾಡಿದ್ದರು.

ರಾಜ್ಯ ಸರ್ಕಾರವು ಸಂತ್ರಸ್ತ ಕುಟುಂಬಗಳಿಗೆ ತಲಾ ಒಟ್ಟು ಒಬ್ಬರು ಲಕ್ಷ ರೂಪಾಯಿಗಳನ್ನು ನೀಡಿದರೆ, ತಾಸಕ ಎಂಆರ್ ಮಂಜುನಾಥ್ ಅವರು ತಲಾ 10 ಲಕ್ಷ ರೂಪಾಯಿಗಳನ್ನು ನೀಡಿದ್ದಾರೆ. ಆದರೆ ತಮಿಳುನಾಡು ಸರ್ಕಾರ ಮೃತರ ಕುಟುಂಬಗಳಿಗೆ ತಲಾ 10 ಲಕ್ಷ ರೂಪಾಯಿಗಳ ಪರಿಹಾರ ನೀಡುವುದಾಗಿ ಸದನದಲ್ಲಿ ಘೋಷಿಸಿದೆ. ರಾಜ್ಯ ಸರ್ಕಾರಕ್ಕಿಂತ ತಲಾ 5 ಲಕ್ಷ ರೂಪಾಯಿಗಳನ್ನು ಹೆಚ್ಚಿಗೆ ನೀಡುತ್ತಿದೆ.

ಪಿಲ್ಲರ್ ಬಿದ್ದು ಶಾಲಾ ಬಾಲಕ ಸಾವು

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು : ಶಾಲೆಯ ಬಳಿ ಇದ್ದ ಹಾಲಿನ ಡೈರಿ ಬಳಿ ಆಟವಾಡುತ್ತಿದ್ದ ಬಾಲಕನ ಮೇಲೆ ಪಿಲ್ಲರ್ ಬಿದ್ದು ಪರಿಣಾಮ ಬಾಲಕ ಸ್ಥಳದಲ್ಲಿಯೇ ಮೃತಪಟ್ಟಿರುವ ಘಟನೆ ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲೂಕು ಹರದನಕೆರೆ ಹೋಬಳಿ, ಮತ್ತಿಘಟ್ಟ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಬೆಳಿಗ್ಗೆ ಗ್ರಾಮದಲ್ಲಿ ನಡೆದಿದೆ. ಬೆಳಿಗ್ಗೆ ಸರಣಿ ರಜೆಯ ಪ್ರಾಥಮಿಕ ಶಾಲೆಯ ಆವರಣಕ್ಕೆ ಹೊಂದಿಕೊಂಡಂತೆಯೇ ಹಾಲು ಉತ್ಪಾದಕರ ಸಹಕಾರ ಸಂಘದ ಕಟ್ಟಡವಿದ್ದು, ಮಂಗಳವಾರ ಬೆಳಿಗ್ಗೆ ಶಾಲೆಗೆ ತೆರಳಿದ್ದ ನಾಲ್ಕೈದು ತರಗತಿಯ ಧನುಷ್ ಡೈರಿ ಬಳಿ ಆಟವಾಡುತ್ತಿದ್ದ ವೇಳೆ ಏಕಾಏಕಿ ಡೈರಿಯ ಪಿಲ್ಲರ್ ಗೋಡೆ(ಕಲ್ಲುಚಪ್ಪಡಿ ಸರಳುಗಳಲ್ಲದ ಇಟ್ಟಿಗೆ ಪಿಲ್ಲರ್) ಏಕಾಏಕಿ ದನುಷ್‌ನ ತಲೆ ಮೇಲೆ ಬಿದ್ದಿದೆ. ಇದರಿಂದ ಬಾಲಕ ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ.

ಡಿಸಿಎಂ ಸಂತಾಪ

ಇನ್ನೂ ಎಳೆಯ ಪ್ರಾಯದ ಕಂದಮ್ಮ ಹೀಗೆ ದುರಂತ ಸಾವಿಗೀಡಾದುದ್ದು ದುರದೃಷ್ಟಕರ. ಹೆತ್ತ ಮಗುವನ್ನು ಕಳೆದುಕೊಂಡ ಹೆತ್ತವರ ನೋವು – ಸಂಕಟವನ್ನು ನಾನು ಅರ್ಥೈಸಿಕೊಳ್ಳಬಲ್ಲೆ. ನೊಂದ ಜೀವಗಳ ಜೊತೆ ನಾನಿದ್ದೇನೆ. ಮೃತನ ಆತ್ಮಕ್ಕೆ ಶಾಂತಿ ಲಭಿಸಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ. ಮೃತ ಬಾಲಕನ ಕುಟುಂಬಕ್ಕೆ ಸೂಕ್ತ ಪರಿಹಾರವನ್ನು ಒದಗಿಸಲಾಗುವುದು. ಮುಂದೆ ಇಂತಹ ಘಟನೆ ಮರುಕಳಿಸದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಿದ್ದೇನೆ. --ಡಾ.ಜಿ.ಪರಮೇಶ್ವರ್

ಮಕ್ಕಳ ಹಕ್ಕುಗಳ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಿ : ಸಂತೋಷ್ ಕುಮಾರ್

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು,: ಮಕ್ಕಳಿಗೆ ಗುಣಮಟ್ಟದ ಆರೋಗ್ಯ ಶಿಕ್ಷಣ ಹಾಗೂ ಸುರಕ್ಷಿತ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಹೆಚ್ಚಿನ ಆದ್ಯತೆ ನೀಡಿ ಕಾರ್ಯನಿರ್ವಹಿಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಸಂತೋಷ್ ಕುಮಾರ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಮಕ್ಕಳ ಹಕ್ಕುಗಳ ಕುರಿತು ಜರುಗಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ವಸತಿ ನಿಲಯಗಳ ಶೌಚಾಲಯ ಸ್ವಚ್ಛತೆ ಹಾಗೂ ಮೂಲಭೂತ ಸೌಲಭ್ಯಗಳ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದರಲ್ಲದೆ, ಮಕ್ಕಳ ಪಾಲನಾ ಸಂಸ್ಥೆಗಳಿಗೆ ಸಂಬಂಧಿಸಿದ ದಾಖಲೆಗಳನ್ನು ನಿಯಮಾನುಸಾರ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ವಸತಿ ನಿಲಯಗಳಲ್ಲಿ ಅಡುಗೆ ಮಾಡಿದ ನಂತರ ಆಹಾರದ ಮಾದರಿಯನ್ನು 24 ಗಂಟೆಗಳ ಕಾಲ ಸಂಗ್ರಹಿಸಿಡಬೇಕು. ಅವಧಿ ಮೀರಿದ ಆಹಾರ ಪದಾರ್ಥಗಳನ್ನು ಯಾವುದೇ ಕಾರಣಕ್ಕೂ ಮಕ್ಕಳ ಸೇವನೆಗೆ ಬಳಸಬಾರದು. ಆಹಾರ ಕೊಡಡಿಯಲ್ಲಿ ಸಂಗ್ರಹಿಸಿರುವ ಪದಾರ್ಥಗಳ ಎಕ್ಸ್‌ಪೈರಿ ದಿನಾಂಕವನ್ನು ನಿಯಮಿತವಾಗಿ ಪರಿಶೀಲಿಸಬೇಕು ಎಂದು ಅಧಿಕಾರಿಗಳಿಗೆ ವಿಚ್ಚರಿಕೆ ನೀಡಿದರು.

ಮಕ್ಕಳಲ್ಲಿ ಓದುವ ಹವ್ಯಾಸ ಬೆಳೆಸುವ ನಿಟ್ಟಿನಲ್ಲಿ ವಸತಿ ನಿಲಯ ಹಾಗೂ ಶಾಲೆಗಳಲ್ಲಿರುವ ಗ್ರಂಥಾಲಯದ ಪುಸ್ತಕಗಳನ್ನು ಮಕ್ಕಳು ನಿಯಮಿತವಾಗಿ ತೆಗೆದುಕೊಂಡು ಓದುವಂತೆ ಪ್ರೋತ್ಸಾಹಿಸಬೇಕು ಎಂದು ತಿಳಿಸಿದರು. ಮಕ್ಕಳ ಆರೋಗ್ಯ ಶಿಕ್ಷಣ, ಪೌಷ್ಟಿಕ ಆಹಾರ, ಸ್ವಚ್ಛತೆ ಹಾಗೂ ಸುರಕ್ಷತೆಗೆ ಸಂಬಂಧಿಸಿದ ಯಾವುದೇ ಸಮಸ್ಯೆಗಳು ಕಂಡು ಬಂದಲ್ಲಿ ತಕ್ಷಣವೇ ಕ್ರಮ ಕೈಗೊಳ್ಳಬೇಕು. ಮಕ್ಕಳ ಹಕ್ಕುಗಳ ರಕ್ಷಣೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಇದಕ್ಕೂ ಮುನ್ನ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಸಂತೋಷ್ ಕುಮಾರ್ ಹಾಗೂ ಸದಸ್ಯ ಸತ್ಯನಾರಾಯಣ ಶೆಟ್ಟಿ ಅವರು ಮಂಗಳವಾರ ತುಮಕೂರು ಜಿಲ್ಲೆಗೆ ಭೇಟಿ ನೀಡಿ ವಿವಿಧ ಶಾಲೆ, ಅಂಗನವಾಡಿ ಕೇಂದ್ರ, ವಸತಿ ನಿಲಯ, ಪೊಲೀಸ್ ಠಾಣೆ, ಆಸ್ಪತ್ರೆ ಹಾಗೂ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಪ್ರತ್ಯೇಕವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಶಂತೋಷ್ ಕುಮಾರ್ ಅವರು ನಗರದ ರೈಲ್ವೆ ಸ್ಟೇಷನ್ ರಸ್ತೆಯಲ್ಲಿರುವ ಶ್ರೀ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲಿಸಿದ ಸಂದರ್ಭದಲ್ಲಿ ವಸತಿ ನಿಲಯಗಳಲ್ಲಿ ಮಕ್ಕಳಿಗೆ ನೀಡುವ ಸೌಲಭ್ಯ, ಕಾಲ ಕಾಲಕ್ಕೆ ಸೇರಿದಂತೆ ಪೌಷ್ಟಿಕ ಆಹಾರವನ್ನೇ ನೀಡಬೇಕು. ನಿಲಯದ ಅಡುಗೆ ಕೋಣೆಯನ್ನು ಪರಿಶೀಲಿಸಿ ಆಹಾರ ತಯಾರಿಕೆಯ ವೇಳೆ ಸ್ವಚ್ಛತೆ ಮತ್ತು ಗುಣಮಟ್ಟವನ್ನು ಕಾಪಾಡಬೇಕು. ಮಕ್ಕಳಿಗೆ ನಿಯಮಿತವಾಗಿ ವೈದ್ಯಕೀಯ ತಪಾಸಣೆ ನಡೆಸಬೇಕು. ಮಕ್ಕಳ ಆರೋಗ್ಯದ ಬಗ್ಗೆ ಅಧಿಕಾರಿಗಳು ಹೆಚ್ಚಿನ ಕಾಳಜಿ ವಹಿಸಬೇಕು ಅಧಿಕಾರಿ/ಸಿಬ್ಬಂದಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪವಿತ್ರ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ ಆಸ್ಟರ್ ಬೇಗ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಡಾ: ಸಿದ್ದರಾಮಣ್ಣ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸೋನಿಯಾ ವೇಕ್ಸೀಕರ್ ಸೇರಿದಂತೆ ಮತ್ತಿತರೆ ಅಧಿಕಾರಿಗಳು ಭಾಗವಹಿಸಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಮಲ್ಲಿಕಾರ್ಜುನಖರ್ಗೆ ಭಾಷಣ ಮಾಡಿದ ಜಾಗವನ್ನು ಗೋಮೂತ್ರ –ಸಗಣಿಯಿಂದ ಸ್ವಚ್ಚ

ತುಮಕೂರಿನಲ್ಲಿ ಜಿಲ್ಲಾ ಕಾಂಗ್ರೆಸ್ ಕಾರ್ಯಕರ್ತರಿಂದ ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು.ಉತ್ತರಾಖಾಂಡದ ರಾಮಲೀಲಾ ಮೈದಾನದಲ್ಲಿ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆಅವರು ಭಾಷಣ ಮಾಡಿದ ಜಾಗವನ್ನು ಗೋ ಮೂತ್ರ ಮತ್ತು ಸಗಣಿಯಿಂದ ಸ್ವಚ್ಚಗೊಳಿಸಿದ ಶ್ರೀರಾಮ ಸೇನೆ ಹಾಗೂ ಬಿಜೆಪಿಯ ಸಕ್ಷದ ಅಂಗ ಸಂಸ್ಥೆಗಳ ಕೃಮವನ್ನು ಖಂಡಿಸಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ. ಚಂದ್ರಶೇಖರಿಗೌಡ ಅವರ ನೇತೃತ್ವದಲ್ಲಿ ಟೌನ್ ಹಾಲ್‌ನಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ಟೌನ್‌ಹಾಲ್ ಮುಂಭಾಗದಲ್ಲಿರುವ ಪಲಂಬೇಡ್ಕರ್ ಪ್ರತಿಮೆಯ ಮುಖ್ಯಾಗದಿಂದ ಬಿಜೆಎಸ್ ವೃತ್ತದವರೆಗೆ ಪಾದಯಾತ್ರೆ ನಡೆಸಿ, ಕೆಲ ಕಾಲ ಮಾನವ ಸರಪಳಿ ನಿರ್ಮಿಸಿದ ಕಾಂಗ್ರೆಸ್‌ಕಾರ್ಯಕರ್ತರು, ದೇಶದಲ್ಲಿ ಇಂದಿಗೂ ಅಸ್ಪೃಶ್ಯತೆ ಆಚರಣೆಯಲ್ಲಿದೆ ಎಂಬುದಕ್ಕೆ ಉತ್ತರಖಂಡದಲ್ಲಿ ನಡೆದಿರುವ ಈ ಘಟನೆಯೇ ಸಾಕ್ಷಿಯಾಗಿದೆ. ಕೇಂದ್ರ ಸರಕಾರ ಮತ್ತುಉತ್ತರಖಂಡದ ಸರಕಾರಗಳು ಮೈದಾನವನ್ನು ಗೋ ಮೂತ್ರ ಮತ್ತು ಸಗಣಿಯಿಂದ ಸ್ವಚ್ಚಗೊಳಿಸಿ ಕಿಡಿಗೇಡಿಗಳನ್ನು ಬಂಧಿಸಿ, ಕಠಿಣ ಕಾನೂನು ಕ್ರಮಜರುಗಿಸುವಲ್ಲಿ ವಿಫಲವಾಗಿವೆ ಎಂದು ಆಗ್ರಹಿಸಿದರು. ಈ ವೇಳೆ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾದ ಇಕ್ಬಾಲ್ ಅಹಮದ್, ಶ್ರೀರಾಮಸೇನೆಯ ಕಾರ್ಯಕರ್ತರು ಮಾಡಿರುವ ಈ ಘೋರ ಕೃತ್ಯ ಇಡೀ ರಾಷ್ಟ್ರವೇ ತಲೆತಗ್ಗಿಸುವಂತಹ ವಿಚಾರವಾಗಿದೆ. ಭಾರತಕ್ಕೆ ಸ್ವಾತಂತ್ರ್ಯ ಬಂದು 80 ವರ್ಷ ಕಳೆದರೂ ಇಂದಿಗೂ ಮನುಷ್ಯರನ್ನು ಮನುಷ್ಯರೆಂದು ಒಪ್ಪಿಕೊಳ್ಳದ ಮನುವಾದಿಗಳ ಈ ನಡೆ, ಭಾರತದಲ್ಲಿ ಅಸ್ಪೃಶ್ಯತೆ ಜೀವಂತವಾಗಿದೆ ಎಂಬುದಕ್ಕೆ ಸಾಕ್ಷಿಯಾಗಿದೆ. ಈ ದೇಶದ ಒಬ್ಬಿ ಜನಸಂಖ್ಯೆಯಲ್ಲಿ ಶೇ35ರಷ್ಟು ದಲಿತ ಸಮುದಾಯವಿದೆ. ಹಿಂಯೂ ನಾವೆಲ್ಲ ಒಂದು ಎನ್ನುವವರು ಈಗ ಎಲ್ಲಿದ್ದಾರೆ. ಅವರಿಗೆ ಇದು ತಪ್ಪು ಎನಿಸುವುದಿಲ್ಲವೇ? ನಿಜಕ್ಕೂ ನಿಮಗೆ ಮನಸಾಕ್ಷಿ ಇದ್ದರೆ ಕೂಡಲೇ ಮೈದಾನವನ್ನು ಗೋ ಮೂತ್ರ ಮತ್ತು ಸಗಣಿಯಿಂದ ಸ್ವಚ್ಚಗೊಳಿಸಿದ ಮತ್ತುದನ್ನು ಮಾಧ್ಯಮದ ಮುಂದೆ ಸಮರ್ಥಿಸಿಕೊಂಡ ಜನರನ್ನು ಕೂಡಲೇ ಬಂಧಿಸಿ, ಮುಂದೆ ಇಂತಹ ಘಟನೆಗಳು ಜರುಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಮಾಜಿ ಶಾಸಕ ಡಾ.ಎಸ್.ರಫೀಕ್ ಅಹಮದ್ ಮಾತನಾಡಿ, ರಾಷ್ಟ್ರಪಿತ ಮಹಾತ್ಮಗಾಂಧಿ ಅವರ ಪ್ರಕಾರದೇಶದಲ್ಲಿ ಅಸ್ಪೃಶ್ಯತೆ ತೊಲಗಿದಾಗ ಮಾತ್ರವಿನವಾದ ಸ್ವಾತಂತ್ರ್ಯಂದಿದ್ದರು. ಆದರೆದೇಶ ಬ್ರಿಟಿಷರಿಂದ ಸ್ವಾತಂತ್ರ ಪಡೆದರು, ಪ್ರಭುತ್ವದ ಹಿತಾಸಕ್ತಿಗಳ ಕಪಿಮುಷ್ಠಿಯಲ್ಲ

ಸಣ್ಣ ಸುದ್ದಿ

ತುಮಕೂರಿನ ರೈಲ್ವೆ ನಿಲ್ದಾಣದ ರಸ್ತೆಯಲ್ಲಿರುವ ಹೈಸ್ಕೂಲ್ ಬಡಾವಣೆಯ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಸಂತೋಷ್‌ಕುಮಾರ್ ಭೇಟಿ ನೀಡಿ ಮಕ್ಕಳ ಜತೆ ಚರ್ಚಿಸಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಡಾ. ಸಿದ್ದರಾಮಣ್ಣ ಮತ್ತಿತರರು ಚಿತ್ರದಲ್ಲಿದ್ದಾರೆ.

ಶ್ರಾವಣ ಮಾಸದ 9ನೇ ವರ್ಷದ ಸಿದ್ದೇಶ್ವರ ಸ್ವಾಮಿಯ ರುದ್ರಾಭಿಷೇಕ

ಸೂರ್ಯಪ್ರಗತಿನ್ಯೂಸ್.ಕಾಂ

ಗುಬ್ಬಿ: ತಾಲೂಕಿನ ಕಡೇಜಾಳ್ಳ ಗ್ರಾಮದಲ್ಲಿರುವ ಶ್ರೀ ಸಿದ್ದೇಶ್ವರ ಸ್ವಾಮಿಯ ಶ್ರಾವಣ ಮಾಸದ 9ನೇ ವರ್ಷದ ರುದ್ರಾಭಿಷೇಕ ಕಾರ್ಯಕ್ರಮವು ಶ್ರೀ ಕ್ಷೇತ್ರ ಆಣಪ್ಪನಹಳ್ಳಿ ಜನೇಶ್ವರ ಮಠದ ಶ್ರೀ ಶ್ರೀ ಸೋಮಶೇಖರ ಸ್ವಾಮೀಜಿಯವರ ನೇತೃತ್ವದಲ್ಲಿ ಶ್ರದ್ಧಾಭಕ್ತಿ ಹಾಗೂ ಸಂಭ್ರಮದಿಂದ ನೆರವೇರಿತು.

ಕಾರ್ಯಕ್ರಮದಲ್ಲಿ ಶ್ರೀ ಸಿದ್ದೇಶ್ವರ ಸ್ವಾಮಿಗೆ ವಿಶೇಷ ಪೂಜೆ, ರುದ್ರಾಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ನೂರಾರು ಭಕ್ತರು ಜಾಲಿಕ್ಕಿಂಡು ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಶ್ರೀ ಶ್ರೀ ಸೋಮಶೇಖರ ಸ್ವಾಮೀಜಿಯವರು, "ಕಡೇಜಾಳ್ಳದ ಜನರಿಗೆ ಆರೋಗ್ಯ, ಆಯುಷ್ಯ ಹಾಗೂ ಐಶ್ವರ್ಯವನ್ನು ಕರುಣಿಸಿ, ಎಲ್ಲರೂ ನೆಮ್ಮದಿಯಿಂದ ಜೀವನ ನಡೆಸುವಂತೆ ಶ್ರೀ ಸಿದ್ದೇಶ್ವರ ಸ್ವಾಮಿಯಲ್ಲಿ ಪ್ರಾರ್ಥಿಸುತ್ತೇನೆ" ಎಂದು ಆಶೀರ್ವದಿಸಿದರು.

ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಮೆರುಗು ನೀಡಿದ ಸಾಂಸ್ಕೃತಿಕ ಕಾರ್ಯಕ್ರಮವನ್ನು ನೆಲಮಂಗಲದ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರು ಹಾಗೂ ಕರ್ನಾಟಕ ಅಗ್ನಿವಂಶ ಕ್ಷತ್ರಿಯ ತಿಗಳರ ಸಂಘದ ಕಾರ್ಯಾಧ್ಯಕ್ಷ ಡಿ. ಆರ್ಜನ್ ಉದ್ಘಾಟಿಸಿದರು. ಜಾನಪದ ಗಾಯಕ ಕೆಸ್ತೂರು ಗೋವಿಂದರಾಜು ಹಾಗೂ ರಂಗಭೂಮಿ ಕಲಾವಿದರಾದ ಟಿ. ಗೊಲ್ಲಹಳ್ಳಿ ಜಿ.ಡಿ. ತಿಮ್ಮೇಗೌಡ್ರು ಸೇರಿದಂತೆ ಹಲವು ಕಲಾವಿದರು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರೇಕ್ಷಕರನ್ನು ರಂಜಿಸಿದರು.

ಕಾರ್ಯಕ್ರಮದಲ್ಲಿ ದೇವಸ್ಥಾನದ ಅಧ್ಯಕ್ಷ ಶಿವಣ್ಣ ಎಸ್., ಖಜಾಂಚಿ ಮೆಳ್ಳಿಗೆ ಶಿವಣ್ಣ, ಶ್ರೀ ಸಿದ್ದೇಶ್ವರ ಸ್ವಾಮಿಯ ಪ್ರಧಾನ ಅರ್ಚಕ ಶಿವರಾಜು ಜೆ., ಹೊಸಹಳ್ಳಿಯ ಶ್ರೀ ಗಂಗಾಧರ ದೇವರು, ಶ್ರೀ ರೇಣುಕಾರಾಧ್ಯ ಕೆಟ್ಟಿಮಠ ಅಗ್ನಿವಂಶ ಕ್ಷತ್ರಿಯ ಸೇನೆಯ ಪದಾಧಿಕಾರಿಗಳು, ಯುವ ಮುಖಂಡರಾದ ಭರತ್, ರಕ್ಷಿತ್, ಸಿದ್ದೇಶ್ ಸೇರಿದಂತೆ ಶ್ರೀ ಸಿದ್ದೇಶ್ವರ ಸ್ವಾಮಿಯ ಭಕ್ತರು ಹಾಗೂ ಕಡೇಜಾಳ್ಳ ಗ್ರಾಮಸ್ಥರು ಉಪಸ್ಥಿತರಿದ್ದರು.

ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ಧರಾಗಲು ಸಹಾಯ ಮಾಡುವ ಅತಿದೊಡ್ಡ ಪ್ರತಿಭಾನ್ವೇಷಣೆ ಪರೀಕ್ಷೆ

ವಿದ್ಯಾರ್ಥಿಗಳಿಗೆ ತಮ್ಮ ಸಿದ್ಧತೆಯನ್ನು ಅಳೆಯಲು, ತಮ್ಮ ಸ್ಪರ್ಧಾತ್ಮಕ ಸಾಮರ್ಥ್ಯವನ್ನು ಅರ್ಥಮಾಡಿಕೊಳ್ಳಲು ಮತ್ತು ಮುಂದಿನ ಪಯಣಕ್ಕೆ ಬಲವಾದ ಅಡಿಪಾಯವನ್ನು ನಿರ್ಮಿಸಲು ಸಹಾಯ ಮಾಡುತ್ತದೆ.

ಕೇವಲ ಅಂತಿಮ ಅಂಕಗಳ ಮೂಲಕ ಕಾರ್ಯಕ್ಷಮತೆಯನ್ನು ಅಳೆಯುವ ಸಾಮಾನ್ಯ ಪರೀಕ್ಷೆಗಳಿಂತ ಭಿನ್ನವಾಗಿ, ಎಎನ್ಎಯ ಅನ್ನು ಸಮಗ್ರ ಮತ್ತು ವೈಜ್ಞಾನಿಕವಾಗಿ ರಚಿಸಲಾದ 'ನೈದಾನಿಕ ಮೌಲ್ಯಮಾಪನ' ಮಾದರಿಯಲ್ಲಿ ವಿನ್ಯಾಸಗೊಳಿಸಲಾಗಿದೆ. ಇಲ್ಲಿನ ಪ್ರಶ್ನೆಯೊಂದು ಪ್ರಶ್ನೆಯೂ ನಿರ್ದಿಷ್ಟ ಉದ್ದೇಶವನ್ನು ಹೊಂದಿದ್ದು, ನಿರ್ದಿಷ್ಟ ಪರಿಕಲ್ಪನೆಗಳು ಮತ್ತು ಸಾಮರ್ಥ್ಯಗಳಿಗೆ ಅನುಗುಣವಾಗಿ ರೂಪಿಸಲಾಗಿದೆ. ಇದರಿಂದಾಗಿ ವಿಷಯ ಜ್ಞಾನ, ವಿಶ್ಲೇಷಣಾತ್ಮಕ ಸಾಮರ್ಥ್ಯ ಮತ್ತು ಪರಿಣಾಮಕಾರಿ ನಡವಳಿಕೆ – ಹೀಗೆ ವಿವಿಧ ಆಯಾಮಗಳಲ್ಲಿ ವಿದ್ಯಾರ್ಥಿಗಳನ್ನು ಮೌಲ್ಯಮಾಪನ ಮಾಡಲು ಸಾಧ್ಯವಾಗುತ್ತದೆ. ಇದು ವಿದ್ಯಾರ್ಥಿಗಳ ಸಿದ್ಧತೆಯನ್ನು ಕೇವಲ ಒಂದು ಸಂಖ್ಯೆಗೆ ಸೀಮಿತಗೊಳಿಸದೆ, ಅವರ ಕಾರ್ಯಕ್ಷಮತೆಯ ಬಗ್ಗೆ ಹೆಚ್ಚು ಅರ್ಥಪೂರ್ಣವಾದ ತಿಳಿವಳಿಕೆಯನ್ನು ಒದಗಿಸುತ್ತದೆ.

ರಾಷ್ಟ್ರೀಯ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅತ್ಯುತ್ತಮ ಫಲಿತಾಂಶಗಳನ್ನು ಸಾಧಿಸಿದ ವಿದ್ಯಾರ್ಥಿಗಳ ಯಶೋಗಾಥೆಗಳಲ್ಲಿ ಈ ಆರಂಭಿಕ ಮೌಲ್ಯಮಾಪನದ ಮಹತ್ವವು ಎದ್ದು ಕಾಣುತ್ತದೆ. ನೀಟ್ ಯುಜಿ 2026 ರಲ್ಲಿ ಅಗ್ರ 100 ಶ್ರೇಯಾಂಕಗಳನ್ನು ಪಡೆದ ಆಕಾಶ್ 41 ವಿದ್ಯಾರ್ಥಿಗಳ ಜೈಕ 31 ಮಂದಿ ಈ ಹಿಂದೆ ಎಎನ್ಎಯ ಮೂಲಕ ಅರ್ಹತೆ ಪಡೆದಿದ್ದರು. ಅದೇ ರೀತಿ, ಜೆಇಇ ಅಡ್ವಾನ್ಸ್ಡ್ 2026 ರ ಅಗ್ರ 100 ಶ್ರೇಯಾಂಕಿತರಲ್ಲಿ 11 ಮಂದಿಯ ಜೈಕ 7 ವಿದ್ಯಾರ್ಥಿಗಳು ಎಎನ್ಎಯ ಮೂಲಕ ಬಂದವರಾಗಿದ್ದಾರೆ. ವಿದ್ಯಾರ್ಥಿಯ ಸ್ಪರ್ಧಾತ್ಮಕ ಹಾದಿಯಲ್ಲಿ ಆರಂಭಿಕ ಗುರುತಿಸುವಿಕೆ, ವ್ಯಕ್ತಿತ್ವ ವೈಕ್ಷಣಿಕ ತಂಡಾರಿ ಮತ್ತು ನಿರಂತರ ಮಾರ್ಗದರ್ಶನವು ಪ್ರಮುಖ ಪಾತ್ರವನ್ನು ಈ ಫಲಿತಾಂಶಗಳು ಎತ್ತಿ ತೋರಿಸುತ್ತವೆ.

ಎಎನ್ಎಯ ಯ ಮಹತ್ವದ ಕುರಿತು ಮಾತನಾಡುತ್ತಾ ಆಕಾಶ್ ಎಜುಕೇಷನಲ್ ಸರ್ವಿಸಸ್ ಲಿಮಿಟೆಡ್ (ಎಇಎಸ್ಎಲ್) ನ ವೈಸ್ಪ್ರಾಪ್ ನಿರ್ದೇಶಕರು ಮತ್ತು ಸಿಇಒ (ಎಂಡಿ & ಸಿಇಒ) ಆದ ಶ್ರೀ ಚಂದ್ರ ಶೇಖರ್ ಗಾರಿಸಾ ರೆಡ್ಡಿ ಅವರು ಹೀಗೆ ಹೇಳಿದರು: "ನಮಗೆ, ಎಎನ್ಎಯ ಕೇವಲ ವಿದ್ಯಾರ್ಥಿಯ ವಿದ್ಯಾರ್ಥಿ-ವೈತನವನ್ನು ನಿರ್ಧರಿಸುವ ಪರೀಕ್ಷೆಯಾಗಿರಲಿಲ್ಲ. ಸರಿಯಾದ ಮಾರ್ಗದರ್ಶನವು ಅರ್ಥಪೂರ್ಣ ಬದಲಾವಣೆಯನ್ನು ತರಬಲ್ಲ ಹಂತದಲ್ಲಿ, ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಸಾಮರ್ಥ್ಯವನ್ನು ಅರಿತುಕೊಳ್ಳಲು ಸಹಾಯ ಮಾಡುವುದು ಇದರ ವಿಶಾಲ ಉದ್ದೇಶವಾಗಿದೆ. ಕಳೆದ 16 ವರ್ಷಗಳಲ್ಲಿ, ಒಂದು ಕೋಟಿಗೂ ಹೆಚ್ಚು ವಿದ್ಯಾರ್ಥಿಗಳು ತಮ್ಮನ್ನು ತಾವು ಅಳೆದುಕೊಳ್ಳಲು ಮತ್ತು ತಮ್ಮ ಪ್ರಶ್ನುತ ಸ್ಥಿತಿಯನ್ನು ತಿಳಿದುಕೊಳ್ಳಲು ಎಎನ್ಎಯ ಲ್ಅನ್ನು ಒಂದು ಅವಕಾಶವಾಗಿ ನಂಬಿದ್ದಾರೆ. ಈ ಪರೀಕ್ಷೆಯು ಮತ್ತು ಮುಂದಿನ ಹಂತಗಳಲ್ಲಿ ತಾವು ಯಾವ ವಿಷಯಗಳಲ್ಲಿ ಬಲವರ್ಧನೆ ಮಾಡಿಕೊಳ್ಳಬೇಕು ಎಂಬುದನ್ನು ಗುರುತಿಸಲು ಈ ಮೌಲ್ಯಮಾಪನವು ಅವರಿಗೆ ಅವಕಾಶ ಕಲ್ಪಿಸುತ್ತದೆ.

ಆ.19ರಿಂದ 22ರವರೆಗೆ ವಿದ್ಯುತ್ ವ್ಯತ್ಯಯ

ಚಿಕ್ಕನಾಯಕನಹಳ್ಳಿ: ಜೆ.ಸಿ.ಪುರ ಸ್ಟೇಷನ್‌ನಲ್ಲಿ ಕಾಮಗಾರಿ ಕೈಗೊಳ್ಳುವ ಹಿನ್ನೆಲೆಯಲ್ಲಿ 110 ಕೆ.ವಿ. ಕೆಪಿ ಕ್ಯಾಸ್, ತಿಮ್ಮನಹಳ್ಳಿ ಮಾರ್ಗದಲ್ಲಿ ಲೈನ್ ಕ್ಲಿಯರ್ ಪಡೆಯಲಾಗಿದ್ದು ಆ.19ರಿಂದ 22ರವರೆಗೆ ನಾಲ್ಕು ದಿನಗಳ ಕಾಲ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ ಎಂದು ಬೆಸ್ಕಾಂ ತಿಳಿಸಿದೆ. ಈ ಹಿನ್ನೆಲೆಯಲ್ಲಿ ತಿಮ್ಮನಹಳ್ಳಿ, ಹುಳಿಯಾರು, ಶೆಟ್ಟಿಕೆರೆ, ಬೆಳಗುರು, ಚಿಕ್ಕನಾಯಕನಹಳ್ಳಿ ಹಾಗೂ ಕಾತ್ರಿಕೆಹಾಳ್ ಉಪವಿಭಾಗ್ಯ ಕೇಂದ್ರಗಳಿಂದ ಹೊರಡುವ ಫೀಡರ್‌ಗಳಲ್ಲಿ ನಿಯಮಿತ ವಿದ್ಯುತ್ ಸರಬರಾಜಿಗೆ ವ್ಯತ್ಯಯವಾಗಲಿದೆ.ನಾಲ್ಕು ದಿನಗಳ ಅವಧಿಯಲ್ಲಿ ಸಾರ್ವಜನಿಕರು ಹಾಗೂ ರೈತರಿಗೆ ಜೆಟ್ಟಿನ ತೊಂದರೆಯಾಗದಂತೆ ಕೃಷಿ ಫೀಡರ್‌ಗಳಿಗೆ ಹಗಲು ಎರಡು ಗಂಟೆ ಹಾಗೂ ರಾತ್ರಿ ಎರಡು ಗಂಟೆ ವಿದ್ಯುತ್ ಸರಬರಾಜು ಮಾಡುವ ಕ್ರಮ ಕೈಗೊಳ್ಳಲಾಗುವುದು ಎಂದು ಬೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಗವರಂಗಯ್ಯ ತಿಳಿಸಿದ್ದಾರೆ. ಕಾಮಗಾರಿ ಹಿನ್ನೆಲೆಯಲ್ಲಿ ಸಾರ್ವಜನಿಕರು, ರೈತರು ಹಾಗೂ ವಿದ್ಯುತ್ ಗ್ರಾಹಕರು ಬೆಸ್ಕಾಂನೊಂದಿಗೆ ಸಹಕರಿಸುವಂತೆ ಮನವಿ ಮಾಡಿಲಾಗಿದೆ.

ಪಾವಗಡ ತಾ॥ ಕುಡಿಯುವ ನೀರಿನ ಘಟಕಗಳು ಕೆಟ್ಟಿವೆ

ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ: ತಾಲೂಕಿನ 37 ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಕೆಳೆದ ಹಲವು ದಿನಗಳಿಂದ ಕಾರ್ಯನಿರ್ವಹಿಸುತ್ತಿಲ್ಲ ಇದರಿಂದ ಸಾರ್ವಜನಿಕರು ಕುಡಿಯುವ ನೀರಿಗೆ ಪರದಾಡುವಂತಾಗಿದೆ ಎಂದು ಭಾರತೀಯ ಪರಿವರ್ತನಾ ಸಂಘ ಬಿಪಿಎಸ್ ದೂರಿದೆ. ಈ ಕುರಿತು ಸಂಘದ ಪದಾಧಿಕಾರಿಗಳು ಮೊದಲು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳ ಪಿಡಿಒ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರು. ಆದರೆ ಪಂಚಾಯಿತಿಯಲ್ಲಿ ಹಣವಿಲ್ಲವೆಂದು ಉತ್ತರಿಸಲಾಗಿದೆ ಎಂದು ಬಿಪಿಎಸ್ ಆರೋಪಿಸಿದೆ. ನಂತರ ಜಿಲ್ಲಾ ಪಂಚಾಯತ್ ಸಿಇಒ ಅವರನ್ನು ಸಂಪರ್ಕಿಸಿದಾಗ ಯಾವ ಹಳ್ಳಿಗಳಲ್ಲಿ ಘಟಕಗಳು ಕೆಟ್ಟಿವೆ ಎಂಬ ಮಾಹಿತಿ ಸಹಿತ ಅರ್ಜಿ ನೀಡಿ, ತಕ್ಷಣ ಸರಿಪಡಿಸುತ್ತೇವೆ ಎಂದು ಭರವಸೆ ನೀಡಿದ್ದರು.

ಇದರ ಬೆನ್ನಲ್ಲೇ ಬಿಪಿಎಸ್ ರಾಜ್ಯಾಧ್ಯಕ್ಷರು ಹಾಗೂ ಹೈಕೋರ್ಟ್ ವಕೀಲರಾದ ಪ್ರೊ. ಹರಿರಾಮ್ ಅವರ ನೇತೃತ್ವದಲ್ಲಿ ತಂದವು ತುಮಕೂರು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಿಗೆ ಲಿಖಿತ ಮನವಿ ಸಲ್ಲಿಸಿತು.



ಮನವಿಯಲ್ಲಿ ಆದಷ್ಟು ಬೇಗವಲ್ಲಿ ಪಾವಗಡ ತಾಲ್ಲೂಕಿನ 37 ಗ್ರಾಮಗಳ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ತಿ ಮಾಡಿ, ಸ್ಥಳೀಯ ಜನತೆಯ ಆರೋಗ್ಯವನ್ನು ಕಾಪಾಡಬೇಕು ಎಂದು ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ತುಮಕೂರು ಜಿಲ್ಲಾ ಬಿಪಿಎಸ್ ಅಧ್ಯಕ್ಷರಾದ ಹೆಜ್. ಕೆಂಚರಾಯ ಮತ್ತು ಸಂಘದ ಮುಖಂಡ ಹನುಮಂತರಾಯಪ್ಪ ಉಪಸ್ಥಿತರಿದ್ದರು.

ಗ್ರಾಮೀಣ ಭಾಗದಲ್ಲಿ ಬೇಸಿಗೆಯ ತೀವ್ರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ನೀರಿನ ಘಟಕಗಳ ದುರಸ್ತಿಗೆ ಜಿಲ್ಲಾಡಳಿತ ಕೂಡಲೇ ಕ್ರಮ ಕೈಗೊಳ್ಳಬೇಕು ಎಂಬುದು ಸ್ಥಳೀಯರ ಒತ್ತಾಯವಾಗಿದೆ.

ನಾಳೆ ಶ್ರೀ ಡಿ.ದೇವರಾಜ ಅರಸು ಜನ್ಮ ದಿನಾಚರಣೆ

ತುಮಕೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಆಗಸ್ಟ್ 20ರ ಬೆಳಗ್ಗೆ 11 ಗಂಟೆಗೆ ನಗರದ ಕೆಂಪಗ್ರೌಂಡ್‌ನಲ್ಲಿ ಸಭಾಂಗಣದಲ್ಲಿ ರಾಜ್ಯದ ಮಾಜಿ ಮುಖ್ಯಮಂತ್ರಿ ಶ್ರೀ ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಸೋನಿಯಾ ವರ್ಗೀಕರ್ ತಿಳಿಸಿದ್ದಾರೆ.

ಜನ್ಮ ದಿನಾಚರಣೆ ಪ್ರಯುಕ್ತ ಮಾಧ್ಯಮ ಅಕಾಡೆಮಿ ಫೆಲೋಷಿಪ್ ಪುರಸ್ಕೃತ ಹಿರಿಯ ಪತ್ರಕರ್ತ ಎಸ್. ಹರೀಶ್ ಆಚಾರ್ಯ ಅವರಿಂದ ಡಿ.ದೇವರಾಜ ಅರಸು ಅವರ ವಿಚಾರಧಾರೆಗಳ ಬಗ್ಗೆ ವಿಶೇಷ ಉಪನ್ಯಾಸ ಏರ್ಪಡಿಸಲಾಗಿದೆ.

ಸೆ.4ರಂದು ಶ್ರೀ ಕೃಷ್ಣ ಜಯಂತಿ; ಡಾ: ಎನ್. ತಿಪ್ಪೇಸ್ವಾಮಿ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲಾಡಳಿತದ ವತಿಯಿಂದ ಸೆಪ್ಟೆಂಬರ್ 4ರ ಶ್ರೀ ಕೃಷ್ಣ ಜನ್ಮಾಷ್ಟಮಿಯಂದು ಆಚರಿಸಲಾಗುವ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮದ ಪ್ರಯುಕ್ತ ಟೌನ್‌ಹಾಲ್ ವೃತ್ತದಿಂದ ಡಾ:

ಬಿ.ಎಸ್. ಕುಚೇರಿವರೆಗೆ ಶ್ರೀ ಕೃಷ್ಣನ ಭಾವಚಿತ್ರಕ್ಕೆ ಹೂವಿನ ಅಲಂಕಾರ, ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡುವ ಕುರಿತು ಸಮಿಂದಾಯದ ಮುಖಂಡರೊಂದಿಗೆ ಚರ್ಚಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ ಕು.ಮಿರ್ಜೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಶ್ರೀ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಸೇರಿದಂತೆ ವಿವಿಧ ಇಲಾಖೆಗಳ ಮುಖ್ಯಸ್ಥರುಗಳು ಹಾಗೂ ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಮುಖಂಡರುಗಳು ಹಾಜರಿದ್ದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲೆಯ ಬಂಜಾರ ಸಮುದಾಯದ ಎಸ್ಎಸ್ಎಲ್ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.95ಕ್ಕಿಂತ ಹೆಚ್ಚು ಅಂಕ ಪಡೆದ 12 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶ್ರೀ ಸೇವಾಲಾಲ್ ಸಹಕಾರ ಪತ್ತಿನ ಬ್ಯಾಂಕ್ ಮತ್ತು ಜಿಲ್ಲಾ ಬಂಜಾರ ಸೇವಾ ಸಂಘದ ವತಿಯಿಂದ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ತುಮಕೂರು ನಗರದ ಸರಸ್ವತಿಪುರಂನಲ್ಲಿರುವ ಜಿಲ್ಲಾ ಬಂಜಾರ ಭವನದಲ್ಲಿ ಈ ಕಾರ್ಯಕ್ರಮ ವಿದ್ಯುಕ್ತವಾಗಿಯೂ ನಡೆಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸ್ಫೂರ್ತಿಕೆ, ಪ್ರಶಸ್ತಿ ಪತ್ರ ಮತ್ತು ನಗದು ಬಹುಮಾನ ನೀಡಿ ಪ್ರೋತ್ಸಾಹಿಸಲಾಯಿತು. ಶೈಕ್ಷಣಿಕವಾಗಿ ಉತ್ತಮ ಸಾಧನೆ ಮಾಡಿರುವ ವಿದ್ಯಾರ್ಥಿಗಳು ಇಂದೇ ಸಮಾಜಕ್ಕೆ ಮಾದರಿಯಾಗಬೇಕು. ಶಿಕ್ಷಣವೊಂದೇ ಸಮುದಾಯದ ಅಭಿವೃದ್ಧಿಗೆ ಮೂಲ ಆಡಿಕ್ಷಾಯ ಎಂದು ವೇದಿಕೆಯ ಗಣ್ಯರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾ ಬಂಜಾರ ಸಂಘದ ಜಿಲ್ಲಾಧ್ಯಕ್ಷ ನಾರಾಯಣ ನಾಯ್ಕ ಡಿ, ಪ್ರಧಾನ ಕಾರ್ಯದರ್ಶಿ ಶಂಕರ್ ಬಿ, ಸಂಘಟನಾ ಕಾರ್ಯದರ್ಶಿ ಕೆ.ಎಲ್. ಸ್ವಾಮಿ ಲಾಲ್, ಶ್ರೀ ಸೇವಾಲಾಲ್ ಸಹಕಾರ ಪತ್ತಿನ ಬ್ಯಾಂಕ್ ಅಧ್ಯಕ್ಷ ಜಬಿಹುಲ್ಲರವರು ಮಾತನಾಡಿ ವಿದ್ಯಾರ್ಥಿಗಳಲ್ಲಿನ ಕಲಾ ಪ್ರತಿಭೆಗಳನ್ನು ಗುರುತಿಸಿ ಬೆಳೆಸಬೇಕಾದರು ಸಮೆಲ್ಲರ ಕರ್ತವ್ಯ.

ಶ್ರೀ ಮಂಜುನಾಥ ರವರು ನಿವೃತ್ತ ಚಿತ್ರ ಕಲಾ ಶಿಕ್ಷಕರು ಹಾಗೂ ಶ್ರೀ ಶಿವಕುಮಾರ್ ರವರು ನಿವೃತ್ತ ಚಿತ್ರ ಕಲಾ ಶಿಕ್ಷಕರುಗಳು ಕಾರ್ಯಕ್ರಮದ ಬಗ್ಗೆ ಹಾಗೂ ಚಿತ್ರಕಲಾ ತಿಳಿವರ ಬಗ್ಗೆ ವಿವರಣೆಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀ ಶುಭೋದಯ ಎಜುಕೇಷನ್ ಟ್ರಸ್ಟ್ ಕಾರ್ಯದರ್ಶಿಗಳಾದ ನಿಖಾರಾಜು ಎಂ, ಖಜಾಂಚಿ ಶ್ರೀಮತಿ ಟಿ.ಪ್ರಿಯಾಂಕ, ಸುಜಾತ ಮುಖ್ಯೋಪಾಧ್ಯಾಯಿನಿ ನೀಡುತ್ತಿರು ಶ್ರೀ ಶುಭೋದಯ ಎಜುಕೇಷನ್ ಟ್ರಸ್ಟ್ ಕೊಡುಗೆ ಮಹತ್ವದ ಇನ್ನು ಹೆಚ್ಚಿನ ಚಿತ್ರ ಕಲಾ ಶಿಬಿರ ಹಾಗೂ ಇತರೆ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ನಡೆಸಲೆಂದು ಅಧ್ಯಕ್ಷರು.

ಕರ್ನಾಟಕ ಅರಣ್ಯ ಅಧಿಕಾರಿಗಳಿಂದ ಬಡ ರೈತರ ಹತ್ಯೆ – ಸಿಪಿಐ(ಎಂ) ಖಂಡನೆ

ಸೂರ್ಯಪ್ರಗತಿನ್ಯೂಸ್.ಕಾಂ

ಚಾಮರಾಜಮನಗರ ಜಿಲ್ಲೆಯ ಹನೂರು ತಾಲ್ಲೂಕಿನ ತೋಮಯ್ಯನ ಪಾಳ್ಯದ ಮೂರು ಜನ ಬಡ ರೈತರನ್ನು ಕರ್ನಾಟಕ ಅರಣ್ಯ ಇಲಾಖೆ ಸಿಬ್ಬಂದಿ ಬರ್ಬರವಾಗಿ ಹತ್ಯೆ ಮಾಡಿರುವುದನ್ನು ಸಿಪಿಐ(ಎಂ) ಜಿಲ್ಲಾ ಸಮಿತಿ ಖಂಡಿಸುತ್ತದೆ. ಹನೂರು ವನ್ಯಜೀವಿ ವಲಯಕ್ಕೆ ಸೇರಿದ ಚಿಕ್ಕಹಳ್ಳೂರು ಮೀಸಲು ಅರಣ್ಯ ಪ್ರದೇಶದ ಶಾಗ್ಯ ಅರಣ್ಯ ವಲಯದ ಪ್ರದೇಶದಲ್ಲಿ ಆಗಸ್ಟ್ 15ರ ಸ್ವಾತಂತ್ರ್ಯ ದಿನದಂದು ಅರಣ್ಯ ಇಲಾಖೆಯ

ಪರಿಸರ , ವನ್ಯಜೀವಿಗಳ ವಿಚಾರದಲ್ಲಿ ರಾಜಕೀಯ ಬೇಡ: ಸಿಬ್ಬಂದಿ ರಕ್ಷಣೆ ಸರ್ಕಾರದ ಕರ್ತವ್ಯ : ಸ್ವಯಂ ಸೇವಾ ಸಂಸ್ಥೆ ಆಗ್ರಹ

ಸೂರ್ಯಪ್ರಗತಿನ್ಯೂಸ್.ಕಾಂ

ಆನೇಕಲ್ : ಕಾವೇರಿ ವನ್ಯಜೀವಿಧಾಮ ವ್ಯಾಪ್ತಿಯಲ್ಲಿ ಸಂಭವಿಸಿದ ಅರಣ್ಯ ಇಲಾಖೆಯ ಎನ್ಕೌಂಟರ್ ವಿಚಾರದಲ್ಲಿ ರಾಜಕೀಯ ಮಾಡದೆ ವನ್ಯಜೀವಿ ಹಂತಕರನ್ನು ಕೊಂದ ಸಿಬ್ಬಂದಿ ಪರವಾಗಿ ಸರ್ಕಾರ ನಿಲ್ಲಬೇಕೆಂದು ಪರಿಸರ ಮತ್ತು ವನ್ಯಜೀವಿ ಹಿತರಕ್ಷಣಾ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಮಂಜುನಾಥ್ ಎನ್ ಬನ್ನೇರುಘಟ್ಟ ಆಗ್ರಹ ಪಡಿಸಿದ್ದಾರೆ.

ವನ್ಯಜೀವಿಗಳನ್ನು ಬೇಟೆಯಾಡಿ ಮಾರಾಟ ಮಾಡುವ ದೊಡ್ಡ ಜಾಲ ಎಲ್ಲೆಡೆ ಹರಡಿ ಕೊಂಡಿದೆ ಇಂದಿನ ಎನ್ಕೌಂಟರ್ ವಿಚಾರದಲ್ಲಿ ಸರ್ಕಾರ, ಸಮಾಜ , ಹಾಗೂ ಪ್ರಿಯರು ಇಲಾಖೆಯ ಸಿಬ್ಬಂದಿಯ ಬೆಂಬಲಕ್ಕೆ ನಿಲ್ಲ ಬೇಕು ಇದು ನಡೆದಿರಬೆ ಮಂದಿನ ದಿನಗಳಲ್ಲಿ ಇಲಾಖೆ ಸಿಬ್ಬಂದಿ ನಿಭೀತಿಯಿಂದ ಕಾಡು ಕಾಯುತ್ತಾರೆ. ವನ್ಯಜೀವಿಗಳ ರಕ್ಷಣೆಗೆ ಕಂಕಣ ಬದ್ಧರಾಗುತ್ತಾರೆ. ನಮ್ಮ ಪರಿಸರ , ಅರಣ್ಯಗಳು ಉಳಿಯ ಬೇಕಾದರೆ ಅರಣ್ಯ ಸಿಬ್ಬಂದಿಯ ಈ ಕರ್ತವನ್ನು ಶ್ಲಾಘಿಸ ಬೇಕೆಂದು ಅವರು ಹೇಳಿದರು.

ಬೆಂಗಳೂರು ಸುತ್ತ ಮುತ್ತಲೂ ವನ್ಯಜೀವಿಗಳ ಬೇಟೆ ಆಗಿದಾಗೆ ನಡೆಯುತ್ತಿರುತ್ತದೆ. ಕೆಲ ಸಾರಿ ಹಂತರನ್ನು ಬಂಧಿಸಿ ಜೈಲಿಗೆ ಹಾಟ್ಟಿದರೂ ಕೆಲವೇ ದಿನಗಳಲ್ಲಿ ಬೇಲ್ ಪಡೆದು ಮತ್ತೆ ವನ್ಯಜೀವಿ ಬೇಟೆಗೆ ಇಳಿಯುತ್ತಾರೆ. ಹೊರು ಸಮೀಪದ ಅರಣ್ಯದಲ್ಲಿ ನಡೆದಿರುವ ಎನ್ಕೌಂಟರ್ ಬೇಟೆಗಾರರಿಗೆ ಭಯ ಹುಟ್ಟಿಸ ಬೇಕೆದೆ ಅದಕ್ಕೆ ಸರ್ಕಾರ ಅರಣ್ಯ ಸಿಬ್ಬಂದಿಯ ಪರವಾಗಿ ನಿಲ್ಲ ಬೇಕೆಂಯ ಅವರು ಹೇಳಿದರು.

ವಿರೋಧ ಪಕ್ಷದವರಲ್ಲಿ ಮನವಿ : ವಿರೋಧ ಪಕ್ಷದ ನಾಯಕರಾದ ಆರೋಕ್ ಸದನಲ್ಲಿ ಹಸುರು ಎನ್ಕೌಂಟರ್ ವಿಷಯ ಪ್ರಸ್ತಾಪಿಸಿ ಸಿಬ್ಬಂದಿ ವಿರುದ್ಧ ಕ್ರಮ ಕೈಗೊಳ್ಳ ಬೇಕು , ಅರಣ್ಯ ಸಚಿವರು ರಾಜೀನಾಮೆ ನೀಡ ಬೇಕೆಂದು ಆಗ್ರಹ ಪಡಿಸಿದ್ದಾರೆ. ಆದರೆ ಅರಣ್ಯ ವನ್ಯಜೀವಿಗಳನ್ನು ಕಾಯುವ ಸಿಬ್ಬಂದಿ ತಮ್ಮ ಕರ್ತವ್ಯದಲ್ಲಿ ತೊಡಗಿದ್ದಾಗ , ಆತ್ಮರಕ್ಷಣೆಗಾಗಿ ಗುಂಡು ಹಾರಿಸಿದ್ದಾರೆ ಇದನ್ನು ನಾವು ಅಧಿಕಾರಿಯ ಬೇಕು ಅದು ಬಿಟ್ಟು ಅರಣ್ಯ ಸಂರಕ್ಷಣೆಯಲ್ಲಿ ರಾಜಕೀಯ ಮಾಡುವುದು ಇಂತಹ ಸಮಯದಲ್ಲಿ ಸರ್ಕಾರ ಮತ್ತು ವಿರೋಧ ಪಕ್ಷ ಕೂಡ ಅರಣ್ಯ ಸಿಬ್ಬಂದಿಯ ಪರವಾಗಿ ನಿಲ್ಲ ಬೇಕು ಆಗ ಮಾತ್ರ ಸಿಬ್ಬಂದಿ ಪ್ರಮಾಣಿಕ ಸೇವೆಗೆ ಮುಂದಾಗುತ್ತಾರೆ ಎಂದು ಅವರು ವಿರೋಧ ಪಕ್ಷದ ನಾಯಕರು ಸದನದಲ್ಲಿ ಅರಣ್ಯ ಸಿಬ್ಬಂದಿಯ ಪರವಾಗಿ ಧ್ವನಿ ಎತ್ತಬೇಕೆಂದು ಮನವಿ ಮಾಡಿದರು.

ಅರಣ್ಯ ಸಚಿವರಲ್ಲಿ ಆಗ್ರಹ : ವನ್ಯಜೀವಿ ಹಂತರ ವಿರುದ್ಧ ಹೋರಾಟದಲ್ಲಿ ತಮ್ಮ ಜೀವವ ಅಂಗು ತೊರೆದು ಹಂತರನ್ನು ಕೊಂದಿರುವ ಸಿಬ್ಬಂದಿಗಳನ್ನು ಅಭಿನಂದಿಸ ಬೇಕೆಂದು ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಅವರಲ್ಲಿ ಮನವಿ ಮಾಡಿದ್ದಾರೆ. ಅರಣ್ಯ ಸಚಿವರು ಯಾವುದೇ ಒತ್ತಡಕ್ಕೆ ಮಣಿದು ಅರಣ್ಯ ಸಿಬ್ಬಂದಿಯ ವಿರುದ್ಧ ಕ್ರಮ ಜರುಗಿಸ ಬೇಡಿ ಎಂದು ಪತ್ರ ಬರೆದು ಆಗ್ರಹ ಪಡಿಸುತ್ತೇವೆ ಎಂದು ಅವರು ಹೇಳಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಪಬ್ಲಿಕ್ ಶಾಲೆ ನಿರ್ಮಾಣಕ್ಕೆ ಸಚಿವ ಬಾಲಕೃಷ್ಣ ಭೂಮಿಪೂಜೆ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ: ಬಿಡದಿಯ ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಪವಿಯಿಂದ ಜಿಲ್ಲೆಯ ಮಾಗಡಿ ಪಟ್ಟಣದಲ್ಲಿ ಕ್ರಮ ಕೈಗೊಳ್ಳ ಬೇಕು , ಅರಣ್ಯ ಸಚಿವರು ರಾಜೀನಾಮೆ ನೀಡ ಬೇಕೆಂದು ಆಗ್ರಹ ಪಡಿಸಿದ್ದಾರೆ. ಆದರೆ ಅರಣ್ಯ ವನ್ಯಜೀವಿಗಳನ್ನು ಕಾಯುವ ಸಿಬ್ಬಂದಿ ತಮ್ಮ ಕರ್ತವ್ಯದಲ್ಲಿ ತೊಡಗಿದ್ದಾಗ , ಆತ್ಮರಕ್ಷಣೆಗಾಗಿ ಗುಂಡು ಹಾರಿಸಿದ್ದಾರೆ ಇದನ್ನು ನಾವು ಅಧಿಕಾರಿಯ ಬೇಕು ಅದು ಬಿಟ್ಟು ಅರಣ್ಯ ಸಂರಕ್ಷಣೆಯಲ್ಲಿ ರಾಜಕೀಯ ಮಾಡುವುದು ಇಂತಹ ಸಮಯದಲ್ಲಿ ಸರ್ಕಾರ ಮತ್ತು ವಿರೋಧ ಪಕ್ಷ ಕೂಡ ಅರಣ್ಯ ಸಿಬ್ಬಂದಿಯ ಪರವಾಗಿ ನಿಲ್ಲ ಬೇಕು ಆಗ ಮಾತ್ರ ಸಿಬ್ಬಂದಿ ನಿಭೀತಿಯಿಂದ ಕಾಡು ಕಾಯುತ್ತಾರೆ. ವನ್ಯಜೀವಿಗಳ ರಕ್ಷಣೆಗೆ ಕಂಕಣ ಬದ್ಧರಾಗುತ್ತಾರೆ. ನಮ್ಮ ಪರಿಸರ , ಅರಣ್ಯಗಳು ಉಳಿಯ ಬೇಕಾದರೆ ಅರಣ್ಯ ಸಿಬ್ಬಂದಿಯ ಈ ಕರ್ತವನ್ನು ಶ್ಲಾಘಿಸ ಬೇಕೆಂದು ಅವರು ಹೇಳಿದರು.

ಸಚಿವ ಬಾಲಕೃಷ್ಣ ಅವರು ಶಾಲೆಯ ಭೂಮಿಪೂಜೆಯನ್ನು ನೆರವೇರಿಸಿದರು.

ಅಭಿವೃದ್ಧಿಯನ್ನೂ ಒಳಗೊಂಡಿದೆ. ಯುವ ಮನಸ್ಸುಗಳು ಕಲಿಯಲು, ಬೆಳೆಯಲು ಹಾಗೂ ತಮ್ಮ ಸಾಮರ್ಥ್ಯವನ್ನು ಸಾಕಾರಗೊಳಿಸಲು ಅವಕಾಶಗಳನ್ನು ಒದಗಿಸುವುದು ನಮ್ಮ ಹೆಮ್ಮೆ ವಿದ್ಯಾರ್ಥಿಗಳಿಗೆ ಅನ್ವೇಷಣೆ ಮತ್ತು ಹೊಸತನವನ್ನು ಅಳವಡಿಸಿಕೊಳ್ಳಲು ಸೂಕ್ತ ವಾತಾವರಣ ದೊರೆತಾಗ, ಅವರು ಭವಿಷ್ಯದ ಶಿಲ್ಪಿಗಳಾಗಿ ರೂಪುಗೊಳ್ಳುತ್ತಾರೆ. ಎಂದು ಹೇಳಿದರು.

ಶಿಕ್ಷಣ, ಕೌಶಲ್ಯಾಭಿವೃದ್ಧಿ, ಪರಿಸರ ಸಂರಕ್ಷಣೆ ಹಾಗೂ ಸಮುದಾಯದ ಕಲ್ಯಾಣ ಕ್ಷೇತ್ರಗಳಲ್ಲಿ ದೀರ್ಘಕಾಲೀನ ಸಾಮಾಜಿಕ ಮೌಲ್ಯ ಸೃಷ್ಟಿಸುವ ಉದ್ದೇಶದಿಂದ ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ನಿರಂತರವಾಗಿ ವಿವಿಧ ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳುತ್ತಿದೆ. ಶಿಕ್ಷಣ ಕೇಂದ್ರೀಕೃತ ಉಚಕ್ರಮಗಳ ಮೂಲಕ ಸಂಸ್ಥೆಯು ಇದುವರೆಗೆ 30,000ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರಯೋಜನವನ್ನು ಒದಗಿಸಲಾಗಿದೆ ಎಂದ ಅವರು ಶಿಕ್ಷಣಕ್ಕೆ ಮೂಲಸೌಕರ್ಯದಲ್ಲಿ ನಿರಂತರ ಹೂಡಿಕೆಗಳ ಮೂಲಕ ಸಮಗ್ರ ಬೆಳವಣಿಗೆ ಮತ್ತು ಭವಿಷ್ಯದ ಪೀಳಿಗೆಯ ಸಬಲೀಕರಣಕ್ಕೆ ತನ್ನ ಬದ್ಧತೆಯನ್ನು ಮುಂದುವರಿಸಿದೆ. ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಟಿಯೋಟಾ ಸಂಸ್ಥೆಯ ನೌಕರರ್ಗ, ಸ್ಥಳೀಯ ಮುಖಂಡರು ಭಾಗವಹಿಸಿದ್ದರು.

ಬೈರಸಂದ್ರದಲ್ಲಿ ಶ್ರೀ ಪಟಾಲಮ್ಮ ದೇವಿ ಮಹೋತ್ಸವ ವಿಜೃಂಭಣೆ

ಐದು ಗ್ರಾಮಗಳ ಒಳಿತಿಗಾಗಿ ಅದ್ದೂರಿ ಪೂಜೆ, ಉತ್ಸವ

ಸೂರ್ಯಪ್ರಗತಿನ್ಯೂಸ್.ಕಾಂ

"ಬೆಂಗಳೂರಿನ ಐದು ಗ್ರಾಮಗಳ ಗ್ರಾಮದೇವತೆಯಾದ ಶ್ರೀ ಪಟಾಲಮ್ಮ ದೇವಿಯ ವಾರ್ಷಿಕ ಮಹೋತ್ಸವವು ಬೈರಸಂದ್ರದಲ್ಲಿ ಆತ್ಮಂತ ಸಡಗರ-ಸಂಭ್ರಮ ಹಾಗೂ ವಿಜೃಂಭಣೆಯಿಂದ ಜರುಗಿತು. ಕಡಕಲಾಳ್ಳ ಬೈರಸಂದ್ರ, ಸಿದ್ದಾಪುರ, ಯಡಿಯೂರು ಹಾಗೂ ನಾಗಸಂದ್ರ ಸೇರಿದಂತೆ ಐದು ಪ್ರಮುಖ ಗ್ರಾಮಗಳ ಆರಾಧ್ಯ ದೇವತೆಯಾದ ಪಟಾಲಮ್ಮ ದೇವಿಯ ಉತ್ಸವ ಮೂರ್ತಿಯನ್ನು ಪುಷ್ಪಾಲಂಕೃತ ಮಂಟಪದಲ್ಲಿ ಪ್ರತಿಷ್ಠಾಪಿಸಿ, ಗ್ರಾಮದ ಪ್ರಮುಖ ಬೀದಿ-ಬೀದಿಗಳಲ್ಲಿ ಭವ್ಯ ಮೆರವಣಿಗೆ ನಡೆಸಲಾಯಿತು. ಗ್ರಾಮಸ್ಥರೆಲ್ಲರೂ ಒಗ್ಗೂಡಿ ಊರಿನ ಸುಭಿಕ್ಷ, ಶಾಂತಿ ಹಾಗೂ ಸಮೃದ್ಧಿಗಾಗಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿ ಕೃತಜ್ಞತೆ ಅರ್ಪಿಸಿದರು."

"ಹಿಂದೆ ಕಷ್ಟದ ದಿನಗಳಲ್ಲಿದ್ದಾಗ ಕೈಹಿಡಿದು, ಇಂದಿನ ಸುಭಿಕ್ಷತೆಗೆ ಕಾರಣವಾಗಿರುವ ತಾಯಿ ಪಟಾಲಮ್ಮನ ಕೃಪಾಶೀರ್ವಾದ ಎಲ್ಲರ ಮೇಲೂ ಸದಾ ಇರಲಿ ಎಂದು ಪ್ರಾರ್ಥಿಸಲಾಯಿತು. ಈ ಅದ್ದೂರಿ ಜಾತ್ರಾಮಹೋತ್ಸವದ ಯಶಸ್ಸಿಗೆ ಕಾರಣಕರ್ತರಾದ ಶಾಂತೇಜಾ, ಮನೋಹರ್, ಮಂಜು, ಪ್ರದೀಪ್, ಲೋಕೇಶ್, ವೆಂಕಟೇಶ್, ದಯಾನಂದ್, ಚಿಂದ್ರ ಸೇರಿದಂತೆ ಗ್ರಾಮದ ಹಿರಿಯರು, ಯುವಕರು ಹಾಗೂ ಮಹಿಳೆಯರು ಅಪಾರ ಸಂಖ್ಯೆಯಲ್ಲಿ ಹಾಲ್ಗೊಂಡು ದೇವಿಯ ದರ್ಶನ ಪಡೆದು ಪುನೀತರಾದರು."

ಸಚಿವ ನಾಗೇಂದ್ರ ರಾಜೀನಾಮೆಗೆ ಬಿಜೆಪಿಯಿಂದ ಧರಣಿ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ : ಮಹರ್ಷಿ ವಾಲ್ಮೀಕಿ ನಿಗಮದ ಕೋಟ್ಯಾಂತರ ರೂ ದುರುಪಯೋಗ ಆರೋಪ ಹೊತ್ತಿರುವ ಬಿ.ನಾಗೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಬಿಜೆಪಿ ನಡಿಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಎರಡನೇ ದಿನವೂ ಮುಂದುವರಿದಿದೆ.

ಜಿಲ್ಲಾಧಿಕಾರಿ ಕಚೇರಿ ಎದುರು ಜಿಲ್ಲಾ ಬಿಜೆಪಿ ಘಟಕದಿಂದ ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಎರಡನೇ ದಿನಕ್ಕೆ ಕಾಲಿಟ್ಟಿದೆ. ಬಿಜೆಪಿ ಜಿಲ್ಲಾಧ್ಯಕ್ಷ ಆನಂದ್ ಸ್ವಾಮಿ ನೇತೃತ್ವದಲ್ಲಿ ಮಂಗಳವಾರ ನಡೆದ ಪ್ರತಿಭಟನೆಯಲ್ಲಿ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು. ಕಾಂಗ್ರೆಸ್ ಸರ್ಕಾರ, ಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಸಚಿವ ಬಿ.ನಾಗೇಂದ್ರ ವಿರುದ್ಧ ಪ್ರತಿಭಟನಾಕಾರರು ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಆನಂದ್ ಸ್ವಾಮಿ ಮಾತನಾಡಿ ಪರಿಶಿಷ್ಟ ಪಂಗಡದ ಜನರ ಅನುಕೂಲ ಮತ್ತು ಅಭ್ಯುದಯಕ್ಕೆ ಮೀಸಲಿಟ್ಟ ಹಣವನ್ನು ಕಾಂಗ್ರೆಸ್ ಸರ್ಕಾರ ಹೇಗೆಲ್ಲ ದುರ್ಬಳಕೆ

ಮಾಡಿಕೊಂಡಿದೆ ಎಂಬುದು ಎಳ್ಳಿರಿಗೂ ತಿಳಿದ ವಿಚಾರ. ತುಳತಕ್ಕೊಳಗಾದ ಜನರ ಅಭಿವೃದ್ಧಿಗೆ ತಕ್ಕಣವೇ ಸಂಭುಟದಿಂದ ವಜಾಗೊಳಿಸಬೇಕು. ಇಷ್ಟಾದ್ರೂ ಹಣವನ್ನು ಲೂಟಿ ಹೊಡೆದ ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ಅನರ್ಹ. ಕೂಡಲೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲಿ ಇಲ್ಲವಾದಲ್ಲಿ ಅವರನ್ನು ಸಂಭುಟದಿಂದ ಸಿಎಂ ಡಿಕೆಶಿ ಸಮರ್ಥಿಸಿಕೊಳ್ಳುವುದನ್ನು ಬಿಟ್ಟು ನೈತಿಕ ಹೊಣೆ ಹೊತ್ತು ಅವರಿಂದ ರಾಜೀನಾಮೆ ಪಡೆಯಬೇಕು ಎಂದು ಒತ್ತಾಯಿಸಿದರು. ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರಕಾಶ್ ಬಸವನಪುರ ಮಾತನಾಡಿ ಸಚಿವನಾಗಿದ್ದ 187 ಕೋಟಿ ಜಗರನದಲ್ಲಿ ಜೈಲಿಗೆ ಹೋಗಿ ಬಂದಿದ್ದಾರೆ. ಅವರನ್ನು ಮತ್ತೆ ಮಂತ್ರಿ ಮಾಡಿದ್ದಾರೆ. ಇದು ಕಾಂಗ್ರೆಸ್ ಭಂಡ ಸರ್ಕಾರ ಎನ್ನುವುದಕ್ಕೆ ಸ್ಪಷ್ಟ ನಿದರ್ಶನವಾಗಿದೆ. ಭ್ರಷ್ಟಾಚಾರದ ಕಳಂಕಿತ ಸಚಿವರನ್ನು ಸಂಭುಟದಿಂದ ಕೈಬಿಡಲು ಸಿಎಂ ಸಿದ್ದರಾಮಯ್ಯ ಅವರಿಗೆ ಧೈರ್ಯವಿಲ್ಲ. ಹೀಗಾಗಿ ಸಿಎಂ ಅವರ ಮೌನವೂ ಸಹ ಅಪರಾಧವಾಗಿದೆ ಎಂದು ಆರೋಪಿಸಿದರು. ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಚಂದ್ರಶೇಖರ್, ರಾಮನಗರ ಪ್ರಾದೇಶಿಕ ಆಯುಕ್ತರಾದ ಮಾಜಿ ಅಧ್ಯಕ್ಷರಾದ ಎಸ್.ಆರ್.ನಾಗರಾಜ್, ಮುರುಳಿ, ಜಿಲ್ಲಾ ಎಸ್ಟಿ ಮೋರ್ಚಾ ಅಧ್ಯಕ್ಷ ಕಾಳಯ್ಯ, ಜಿಲ್ಲಾ ಕಾರ್ಯಾಲಯ ಕಾರ್ಯದರ್ಶಿ ಚನ್ನಪ್ಪಚನ್ನಪಟ್ಟಣ ಮಂಡಲ ಅಧ್ಯಕ್ಷ ಚೇತನ್, ರಾಮನಗರ ನಗರ ಘಟಕದ ಅಧ್ಯಕ್ಷ ಚಂದನ್ ಮೋರೆ, ಮಾಧ್ಯಮ ಸಂಯೋಜಕ ಅಶ್ವಿನ್ ಗೌಡ ಸೇರಿದಂತೆ ಹಲವರು ಭಾಗವಹಿಸಿದ್ದರು.

ಟೌನ್‌ಶಿಪ್ ಶೀಘ್ರ ಜಾರಿಗೆ ಯೋಜನೆ ಪರ ರೈತರ ಆಗ್ರಹ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ: ಬಿಡದಿ ಟೌನ್‌ಶಿಪ್ ಯೋಜನೆಯನ್ನು ಶೀಘ್ರ ಜಾರಿಗೊಳಿಸುವ ಜೊತೆಗೆ ಬೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಮಗಳಲ್ಲಿ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಅಂತಿಮ ಅಧಿಸೂಚನೆ ಹೊರಡಿಸುವಂತೆ ಆಗ್ರಹಿಸಿ ಯೋಜನೆ ಪರ ರೈತರು ಹಾಗೂ ಭೂ ಮಾಲೀಕರು ಪ್ರತಿಭಟನೆ ನಡೆಸಿದರು.

ನಗರದ ಕಂದಾಯ ಭವನದಲ್ಲಿರುವ ಜಿಬಿಡಿಎ ಕಚೇರಿ ಎದುರು ಮಂಗಳವಾರ ಜಮಾವಣೆಗೊಂಡ ಭೂಸ್ವಾಧೀನ ಪರ ಸಾರಾಗಿರುವ ರೈತರು, ಭೂಮಾಲೀಕರು ಬಿಡದಿ ಟೌನ್‌ಶಿಪ್ (ಜಿಬಿಟಿ) ಯೋಜನೆಯನ್ನು ಶೀಘ್ರ ಜಾರಿಗೆಗೊಳಿಸಿ, ಇಲ್ಲವಾದಲ್ಲಿ ತಾವಿಗಾರ ಧನ ಹೆಚ್ಚಿಸಿ ಎಂದು ಘೋಷಣೆ ಕೂಗಿ, ತಮ್ಮ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿದರು. ಯೋಜನೆಗೆ ಗುರುತಾದ 9 ಗ್ರಾಮಗಳ ಪೈಕಿ ಬಾಕಿ ಉಳಿರಿರುವ ಬೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಮಗಳ ಭೂಸ್ವಾಧೀನಕ್ಕೆ ತಕ್ಷಣವೇ ಅಧಿಸೂಚನೆ ಹೊರಡಿಸುವಂತೆ ಜಿಬಿಡಿಎ ಅಧಿಕಾರಿಗಳನ್ನು ಒತ್ತಾಯಿಸಿದರು.

ಬಹುತೇಕ ರೈತರು ಮತ್ತು ಭೂಮಾಲೀಕರು ಬೆಂಬಲ ಸೂಚಿಸಿದ್ದು ಉಳಿದ ಎರಡು ಗ್ರಾಮಗಳ ಭೂಸ್ವಾಧೀನ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಪೂರ್ಣಗೊಳಿಸಿ ರೈತರಿಗೆ ಪರಿಹಾರ ಧನವನ್ನು ಶೀಘ್ರವೇ ಬಿಡುಗಡೆ ಮಾಡುವಂತೆ ಕೋರಿ ಜಿಬಿಡಿಎ ಅಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರತ್ಯೇಕ ಮನವಿ ಪತ್ರಗಳನ್ನು ಸಲ್ಲಿಸಿದರು.

ಈ ವೇಳೆ ತಾಜಂ ಮಾಜಿ ಸದಸ್ಯ ರೈತ ಮುಖಂಡ ಹೊಸೂರು ರಾಜಣ್ಣ ಮಾತನಾಡಿ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಸರ್ಕಾರದ ವಿಳಂಬ ನೀತಿಯಿಂದಾಗಿ ಟೌನ್‌ಶಿಪ್ ಯೋಜನೆ ಭೂಸ್ವಾಧೀನಕ್ಕೆ ಸಂಬಂಧಿಸಿದ ಪ್ರಕ್ರಿಯೆಗಳಿಗೆ ಸ್ಥಗಿತಗೊಂಡಿವೆ. ಸಂಬಂಧಪಟ್ಟಚ್ಚು ತಾಲೂಕಿನಾದ್ಯಂತ ಕಾರ್ಡ್ ವಿತರಿಸಲು ಸೆ.15ರವರೆಗೂ ಜಾಬ್ ಕಾರ್ಡ್ ಮೇಳವನ್ನು ಹಮ್ಮಿಕೊಳ್ಳಲಾಗಿದ್ದು, ಅರ್ಜ ಕುಟುಂಬಗಳು ಈ ಮೇಳದಲ್ಲಿ ಭಾಗವಹಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಜಾಬ್ ಕಾರ್ಡ್ ಹೊಂದಿಲ್ಲದ ಅರ್ಹ ಕುಟುಂಬಗಳಿಗೆ ಸ್ಥಳದಲ್ಲೇ ಪರಿಶೀಲಿಸಿ ಹೊಸ ಉದ್ಯೋಗ ಚೀಟಿ ವಿತರಿಸಲಾಗುವುದು. ಈಗಾಗಲೇ ಜಾಬ್ ಕಾರ್ಡ್ ಹೊಂದಿದ್ದು, ಇ-ಕೆವೈಸಿ ಪ್ರಕ್ರಿಯೆ ಬಾಕಿಯಿರುವವರು ಈ ಮೇಳದಲ್ಲಿ ಇ-ಕೆವೈಸಿ ಪೂರ್ಣಗೊಳಿಸಿಕೊಳ್ಳಬಹುದು.

ಸೆ.15ರವರೆಗೆ ಗ್ರಾಮೀಣ ರೋಜ್ಗಾರ್ ಗ್ಯಾರಂಟಿ ಕಾರ್ಡ್ ವಿತರಣೆ

ತಮಕೂರು: ತಾಲೂಕಿನ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮೀಣ ಪ್ರದೇಶದ ಅರ್ಹ ಕುಟುಂಬಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ವಿಬಿ ಜಿ ರಾಮ್ ಜಿ ಯೋಜನೆಯಡಿ ಸೆಪ್ಟೆಂಬರ್ 15ರವರೆಗೂ ಗ್ರಾಮೀಣ ರೋಜ್ಗಾರ್ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಿಸಲಾಗುವುದು ಎಂದು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮೀನಾರಾಯಣಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಲಾಖೆಯ ಹಿರಿಯ ಅಧಿಕಾರಿಗಳು ಕೂಡಲೇ ಮಧ್ಯ ಪ್ರವೇಶಿಸಿ, ಬಾಕಿ ಉಳಿರಿರುವ ಎರಡು ಗ್ರಾಮಗಳಿಗೆ ಅಧಿಸೂಚನೆಯನ್ನು ಶೀಘ್ರ ಅಧಿಕೃತವಾಗಿ ಪ್ರಕಟಿಸಲಿಕ್ಕೆ ಒತ್ತಾಯಿಸಿದರು. ಒಂದು ವೇಳೆ ನಮ್ಮ ನ್ಯಾಯಯುತ ಬೇಡಿಕೆಯನ್ನು ನಿರ್ಲಕ್ಷಿಸಿದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ಎಚ್ಚರಿಕೆ ನೀಡಿದರು.

ಭೂಮಾಲೀಕ ಎಚ್.ಎಸ್.ಸದ್ದರಾಜು ಮಾತನಾಡಿ, ಭೂಸ್ವಾಧೀನ ಪ್ರಕ್ರಿಯೆಯಿಂದ ಹೊರಗುಳಿದಿರುವ ಬೈರಮಂಗಲ ಹಾಗೂ ಕಂಚುಗಾರನಹಳ್ಳಿ ಎರಡು ಗ್ರಾಮಗಳಲ್ಲಿ 6/1 ಅಂತಿಮ ಅಧಿಸೂಚನೆ ಹೊರಡಿಸುವಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಸ್ತುವಾರಿ ಸಚಿವರಾದ ಪರಂಗೆಸಿ ಬಾಕಿ ಇರುವ ಪರಿಹಾರವನ್ನು ತಕ್ಷಣವೇ ಬಿಡುಗಡೆ ಮಾಡಬೇಕೆಂದು ರೈತ ಮುಖಂಡರು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಯಾಲಕ್ಕಪ್ಪ, ಗೌತಮ್‌ಗೌಡ, ಭರತ್, ಸುನಿಲ್, ಚಾಲಕ್ಕಪ್ಪ, ತಿಮ್ಮಯ್ಯ, ಮಂಜುನಾಥ್, ಶಿವಕುಮಾರ್, ಬೆಂಕಿಚಾಲಯ್ಯ, ರಾಮಾಂಜಿನಿ, ಕೃಷ್ಣಮೂರ್ತಿ, ಅಂಚೆಪುರ ಶೇಖರ್ ಸೇರಿದಂತೆ ಹಲವರಿದ್ದರು.

ಸೊಸೈಟಿಯ

ನನಗೆ ಅಧಿಕಾರವಿರಲಿ ಬಿಡಲಿ ಜನರ ಜೊತೆ ಸದಾ ಇರುವೆ

ಸೂರ್ಯಪ್ರಗತಿನ್ಯೂಸ್.ಕಾಂ

ಕೊರಟಗೆರೆ- ರಾಜಕೀಯ ಬದುಕಿನಲ್ಲಿ ನನಗೆ ಅಧಿಕಾರವಿರಲಿ ಬಿಡಲಿ ಜನರ ಜೊತೆ ಸದಾ ಇರುವೆ ನನ್ನ ಹುಟ್ಟಿದ್ದ ಹುಬ್ಬನ್ನು ನನ್ನ ಸ್ನೇಹಿತರು ಮತ್ತು ಹಿತೈಷಿಗಳು ಆಚರಿಸುವುದನ್ನು ನೋಡಿ ನನಗೆ ತುಂಬಾ ಸಂತೋಷವಾಗಿದೆ ಎಂದು ಮಾಜಿ ಶಾಸಕ ಸುಧಾಕರಲಾಲ್ ತಿಳಿಸಿದರು.

ಅವರು ಕೊರಟಗೆರೆ ಹುಬ್ಬಾದಲ್ಲಿ ಅವರ 58ನೇ ಹುಟ್ಟಿದ ಹುಬ್ಬನ್ನು ಅವರ ಅಭಿಮಾನಿಗಳು ಹಾಗೂ ಜೆಡಿಎಸ್ ಪಕ್ಷದ ಕಾರ್ಯಕರ್ತರು ಮುಖಂಡರು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿ ಮನುಷ್ಯ ಅಧಿಕಾರದಲ್ಲಿ ಇದ್ದಾಗ ಅಭಿಮಾನಿಗಳು ಕಾರ್ಯಕರ್ತರು ಇರುವುದು ಸಾಮಾನ್ಯ. ಆದರೆ ಅಧಿಕಾರದಲ್ಲಿ ಇಲ್ಲದಿದ್ದರೂ ನನ್ನ ಹುಟ್ಟಿದ್ದ ಹುಬ್ಬವನ್ನು ಅರ್ಥಪೂರ್ಣವಾಗಿ ನೂರಾರು ಕಾರ್ಯಕರ್ತರು ಆಚರಿಸಿರುವುದು ಸಂತೋಷತಂದಿದೆ, ನನಗೆ ಅಧಿಕಾರ ಇರಲಿ ಬಿಡಲಿ ಕ್ಷೇತ್ರದ ಜನರ ಜೊತೆ ಇರುವೆ ನನ್ನ ಕೈಲಾದಷ್ಟು ಸೇವೆ ಮಾಡುವೆ ನನ್ನ ಪಕ್ಷದ ಕಾರ್ಯಕರ್ತರು, ಮುಖಂಡರು ಅಭಿಮಾನಿಗಳಿಗೆ ನಾನು ಚಿರರುಣಿ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಪಪಂ. ಸದಸ್ಯ ಆಶ್ವತ್ಥನಾರಾಯಣರಾಜು ಮಾತನಾಡಿ ಮಾಜಿ ಶಾಸಕರಾದ ಸುಧಾಕರಲಾಲ್ ರವರು ಸಾವಿರಾರು ಬಡವರಿಗೆ ಉಚಿತವಾಗಿ ಕನ್ಣೇನ ಶಸ್ತ್ರಚಿಕಿತ್ಸೆ ವಿವಿಧ ಕಾಯಿಲೆಗಳಿಗೆ ಚಿಕಿತ್ಸೆಯನ್ನು ಮಾಡಿಸಿದ್ದಾರೆ ದೇವರು ಅವರಿಗೆ ಇನ್ನು ಹೆಚ್ಚಿನ ರಾಜಕೀಯ ಶಕ್ತಿ ನೀಡಲಿ ಎಂದರು.

ಮುಖಂಡ ಶಶಿಕುಮಾರ್ ಮಾತನಾಡಿ ಸುಧಾಕರಲಾಲ್‌ರವರ ಹುಟ್ಟಿದ ಹುಬ್ಬದಂದು ಜೆಡಿಎಸ್ ಕಾರ್ಯಕರ್ತರು ಮುಖಂಡರು ಸೇರಿ ಹಬ್ಬೂದ ಸಾರ್ವಜನಿಕ ಆಸ್ಪತ್ರೆಯಲ್ಲಿನ ಒಳರೋಗಿಗಳಿಗೆ ಹಣ್ಣು ಮತ್ತು ಬ್ರೆಡ್ ವಿತರಿಸಿ, ಬಸ್ಸಾಂಡ್ ವೃತ್ತದಲ್ಲಿ ಬಡವರಿಗೆ ಅನ್ನದಾನ ಸಂತರ್ಪಣೆ ಮಾಡಿ, ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಬೃಹತ್ ಕೇಕ್‌ನ್ನು ಕಟ್ ಮಾಡಿಸಿದ ಮೂಲಕ ಆಚರಿಸುತ್ತಿದ್ದೇವೆ ಎಂದರು.

ಮುಖಂಡ ಕೆ.ಜಿ.ರಮೇಶ್ ಮಾತನಾಡಿ ಮುಂದಿನ ವಿಧಾನಸಭಾ ಚುನಾವಣೆಯನ್ನು ಸುಧಾಕರಲಾಲ್ ರವರ ನೇತೃತ್ವದಲ್ಲಿಯೇ ಎದುರುಸುತ್ತೇವೆ ಅವರ ಜನಪ್ರಿಯತೆ ಜನರಲ್ಲಿ ಇನ್ನು ಇದ್ದು ಅಭಿಮಾನಿಗಳು ಸಹ ಅವರ ಹಿಂದೆ ಇದ್ದಾರೆ ಅವರ ಜನಪರ ಕಾರ್ಯಕ್ರಮಗಳೇ ಅವರಿಗೆ ಶ್ರೀರಕ್ಷೆ ಎಂದರು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡರಾದ ಲಕ್ಷ್ಮಣ್, ಕಾರ್ಯಸಿದ್ದರಾಜು, ಬಂಕೇಗಾಳ್ಳಿಪ್ರಕಾಶ್, ಸಾಕರಾಜು, ನಟರಾಜು, ಕಾಕೆಮಲ್ಲಣ್ಣ, ವಿಎಸ್ಎಸ್ಎನ್ ರಮೇಶ್, ಕೌಶಿಕ್, ಶ್ರೀಧರ್, ಹೈಯಾತ್ ಖಾನ್, ಫಾರೂಕ್, ಸತೀಶ್, ಕಾಂತರಾಜು, ದೀಪು, ದೇವರಾಜು, ಸೀಂದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

ಚಿತ್ರ- ಕೊರಟಗೆರೆ ಹಬ್ಬೂಂಲ್ಲಿ ಮಾಜಿ ಶಾಸಕ ಸುಧಾಕರಲಾಲ್ ರವರ ಹುಟ್ಟಿದ ಹುಬ್ಬವನ್ನು ಆಚರಿಸಲಾಯಿತು.

ತುಮಕೂರು: ನಗರದ ಕುಣಿಗಲ್ ರಸ್ತೆಯಲ್ಲಿರುವ ಪಂಚಾಯತ್ ರಾಜ್ ಎಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ಕಚೇರಿ ಆವರಣದಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಶ್ರದ್ಧೆಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪಂಚಾಯತ್ ರಾಜ್ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ಎಲ್. ಬಿ. ಅನಿಲ್ ಸಿರಿಗಿದ್ದೆ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಸಬ್ಬಂದಿಗೆ ಸ್ವಾತಂತ್ರ್ಯ ದಿನದ ಶುಭಾಶಯ ಕೋರಿದರು.

ತುಮಕೂರು: ನಗರದ ಕುಣಿಗಲ್ ರಸ್ತೆಯಲ್ಲಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಎಂಜಿನಿಯರ್ ಕಚೇರಿ ಆವರಣದಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಶ್ರದ್ಧೆ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು.ಕಾರ್ಯಕ್ರಮದಲ್ಲಿ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಲಕ್ಷ್ಮೀಕಾಂತ್ ಎನ್. ಸಿ. ಸೀಂದಂತೆ ಇಲಾಖೆಯ ವಿವಿಧ ಅಧಿಕಾರಿಗಳು ಹಾಗೂ ಸಬ್ಬಂದಿ ವರ್ಗದವರು ಉಪಸ್ಥಿತರಾದ್ದರು.

ಬಸ್‌ಗೆ ಅಡ್ಡಲಾಗಿ ಮಲಗಿ ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು, : ಗ್ರಾಮೀಣ ಭಾಗಗಳಿಗೆ ಸುಕ್ತ ಸಮಯಕ್ಕೆ ಸಮರ್ಪಕ ಬಸ್ ಸೌಕರ್ಯ ಕಲ್ಪಿಸುವಂತೆ ಆಗ್ರಹಿಸಿ ತುಮಕೂರು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಅಖಿಲ ಭಾರತ ವಿದ್ಯಾರ್ಥಿ ಪರಿಷತ್ ನೇತೃತ್ವದಲ್ಲಿ ವಿದ್ಯಾರ್ಥಿಗಳು ಬಸ್‌ಗಳಿಗೆ ಅಡ್ಡಲಾಗಿ ಮಲಗಿ ಭಾರಿ ಪ್ರತಿಭಟನೆ ನಡೆಸಿದ್ದಾರೆ.

ಶಾಲಾ-ಕಾಲೇಜುಗಳಿಗೆ ತೆರಳಲು ಸುಕ್ತ ಸಮಯಕ್ಕೆ ಬಸ್‌ಗಳು ಸಿಗದೆ ಪರದಾಡುತ್ತಿರುವ ವಿದ್ಯಾರ್ಥಿಗಳು, ಸರ್ಕಾರ ಹಾಗೂ ಸಾರಿಗೆ ಇಲಾಖೆಯ ನಿರ್ಲಕ್ಷ್ಯದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಬಸ್ ನಿಲ್ದಾಣದ ಒಳಗೆ ಕೆಎಸ್‌ಆರ್‌ಟಿಸಿ ಬಸ್‌ಗಳು ಚಲಿಸದಂತೆ ಬಸ್‌ಗಳ ಮುಂದೆ ಅಡ್ಡಮಲಗಿದ ವಿದ್ಯಾರ್ಥಿಗಳು, ಬಸ್‌ಗಳನ್ನು ತಡೆದು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿದರು. ಬಸ್ ತಡೆದು ಸಾರ್ವಜನಿಕ ಸಂಚಾರಕ್ಕೆ ಅಡಚಣೆ ಉಂಟುಮಾಡಿದ್ದನ್ನು ತಡೆಯಲು ಬಂದ ಪೊಲೀಸರು ಹಾಗೂ ವಿದ್ಯಾರ್ಥಿಗಳ ನಡುವೆ ತೀವ್ರ ತಳ್ಳಾಟ-ಪಟಾಟಿ ಹಾಗೂ ವಾಗ್ವಾದ ನಡೆಯಿತು. ಕೊರಟಗೆರೆ, ಪಾವಗಡ, ಮಧುಗಿರಿ ಹಾಗೂ ಚಿಕ್ಕನಾಯಕನಹಳ್ಳಿ ಭಾಗಗಳಿಂದ ನಗರದ ಕಾಲೇಜುಗಳಿಗೆ ಸಾವಿರಾರು ವಿದ್ಯಾರ್ಥಿಗಳು ನಿತ್ಯ ಸಂಚರಿಸುತ್ತಿದ್ದು, ಈ ಮಾರ್ಗಗಳಲ್ಲಿ ಹೆಚ್ಚುವರಿ ಬಸ್‌ಗಳನ್ನು ಓಡಿಸಬೇಕು ಎಂದು ವಿದ್ಯಾರ್ಥಿಗಳು ಒತ್ತಾಯಿಸಿದರು. "ಸರ್ಕಾರ ನಮಗೆ ಉಚಿತ ಬಸ್ ಪಾಸ್ ನೀಡಿದೆ. ಆದರೆ ಸಮಯಕ್ಕೆ ಸರಿಯಾಗಿ ಬಸ್‌ಗಳೇ ಬರದಿರುವುದರಿಂದ ನಾವು ಕಾಲೇಜುಗಳಿಗೆ ಸರಿಯಾದ ಸಮಯಕ್ಕೆ ತಲುಪಲಾಗುತ್ತಿಲ್ಲ" ಎಂದು ಆಕ್ರೋಶ ಹೊರಹಾಕಿದರು.

ಸರ್ಕಾರಿ ಇನಾಂ ಭೂಮಿಯನ್ನು ಕಾನೂನು ಬಾಹಿರವಾಗಿ ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧ

ಪಾವಗಡ: ತಾಲೂಕಿನ ಕಸಬಾ ಹೋಬಳಿ ವಿರುಪಸಮುದ್ರ ಗ್ರಾಮದ ಸರ್ವೆ ನಂಬರ್ 142ರಲ್ಲಿರುವ 1 ಎಕರೆ 27 ಗುಂಟೆ ಸರ್ಕಾರಿ ಇನಾಂ ಜಮೀನನ್ನು ಸರ್ಕಾರದ ಪಕ್ಷಕ್ಕೆ ಪಡಿದಿರುವ ಕ್ರಮವನ್ನು ಗೌಡೇಚಿ ಪ್ರಭಾಕರ ಸ್ವಾಗತಿಸಿದ್ದಾರೆ. ತಹಸೀಲ್ದಾರ್ ನ್ಯಾಯಾಲಯದ ಪೀಕಾಧಿಕಾರಿ ವೈ. ರವಿ ಅವರು ಆಗಸ್ಟ್ 17ರಂದು ನೀಡಿದ ಆದೇಶದಲ್ಲಿ, ವಿವಾದಿತ ಜಮೀನಿಗೆ ಸಂಬಂಧಿಸಿದಂತೆ ಆರ್.ಟಿ.ಸಿಯನ್ನು ಯಥಾಸ್ಥಿತಿಯಲ್ಲಿ ಮುಂದುವರಿಸಲು ಸೂಚಿಸಿದ್ದಾರೆ. ಈ ಆದೇಶವನ್ನು ಗಣಕೀಕರಿಸಿ ಅದೇ ದಿನ ಮುಕ್ತ ನ್ಯಾಯಾಲಯದಲ್ಲಿ ಪ್ರಕಟಿಸಲಾಗಿದೆ. ಪ್ರಕರಣದ ಸಂಖ್ಯೆ: RRTDISP/136/2026, KLR ACT ಕಲಂ ಮತ್ತು ನಿಯಮಗಳ ಅಡಿ ದಾಖಲಿಸಾಗಿದೆ.

ಪ್ರಕರಣದ ಹಿನ್ನೆಲೆ ಏನು..?

ಆಂಧ್ರಪ್ರದೇಶದ ಕಲ್ಯಾಣದುರ್ಗದ ಶ್ರೀಧರ್ ಬಿನ್ ವಿಪರಣ ಮಸ್ತಾನ ಎಂಬುವರು, ಇನಾಂ ಜಮೀನನ್ನು ತಮ್ಮ ಹೆಸರಿಗೆ ಖಾತೆ ವರ್ಗಾವಣೆ ಮಾಡಿಕೊಂಡು, ಪಾವಗಡ ಉಪ ನೊಂದಣಾಧಿಕಾರಿಗಳ ಕಚೇರಿಯಲ್ಲಿ ದಿನಾಂಕ 05.06.2026 ರಂದು ನೋಂದಣಿ ಸಂಖ್ಯೆ ಇ/920/2026/27 ರಲ್ಲಿ ನಕಲಿ ಕೋಲ ಮಾರಾಟ ಪತ್ರವನ್ನು ಅವರಿಗೆ ಮಾರಾಟ ಮಾಡಿದ್ದರು. ಸರ್ಕಾರಿ ಇನಾಂ ಜಮೀನು ಮಾರಾಟ ಕಾನೂನು ಬಾಹಿರ ಎಂದು ಪ್ರಭಾಕರ ಅವರು ತಹಸೀಲ್ದಾರ್ ಅವರಿಗೆ ತಕರಾರು ಅರ್ಜಿ ಸಲ್ಲಿಸಿದ್ದರು.

ಪ್ರತಿವಾದಿ ಪ್ರಭಾಕರ ಪರ ವಕೀಲ ಎಸ್.ಎಸ್.ಧಫಾ ಅವರು ವಾದ ಮಂಡಿಸಿ, ಜಮೀನು ಮೂಲತಃ ಇನಾಂ ಆಗಿದ್ದು ರಿಜಿಸ್ಟ್ರಾರ್ ಆಗಿ ಎಂದು ವಾದಿಸಿದರು. ನ್ಯಾಯಾಲಯವು ದಾಖಲೆ ಪರಿಶೀಲಿಸಿ, ರಿಜಿಸ್ಟ್ರಾರ್ ಆದೇಶವಿಲ್ಲದೆ ಕಾಯಿದೆ ಅಡಿಯಲ್ಲಿ ಇನಾಂ ಭೂಮಿಯನ್ನು ಕಾನೂನುಬಾಹಿರವಾಗಿ ಖಾತೆ ಮಾಡಿಕೊಂಡು ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧ ಎಂದು ಹೇಳಿದರು. ದಾಖಲೆಗಳನ್ನು ಪರಿಶೀಲಿಸಿದ ಪೌಶಿ ಖಾತೆ ಮಾಡಿಕೊಟ್ಟ ಆರೋಪದ ಮೇಲೆ ಗ್ರಾಮ ಲೆಕ್ಕಾಧಿಕಾರಿ ಮಾಯಾಗಯ್ಯ ಅವರ ವಿರುದ್ಧಪೊಲೀಸಿನಲ್ಲಿ ಪ್ರೊಕದ್ದಮೆ ದಾಖಲಿಸಿ ಸಮಗ್ರತನಿಖೆ ನಡೆಸಲಿದೆಂದು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದಾಗಿ ತಿಳಿದರು. ಜೊತೆಗೆ, ನಕಲಿ ದಾಖಲೆ ಸೃಷ್ಟಿಸಿ ಪಾವಗಡ ತಾಲೂಕಿನ

ಗೌಡೇಚಿ ಗ್ರಾಮದ ಸರ್ವೆ ನಂ.78, ಕನಕಪುರ ಗ್ರಾಮದ ಸರ್ವೆ ನಂ.152 ಮತ್ತು ಸರ್ವೆ ನಂ.11/1 ರ ಜಮೀನುಗಳನ್ನು ಕಬಳಿಸಲು ಯತ್ನಿಸುತ್ತಿರುವ ಆಂಧ್ರಪ್ರದೇಶದ ನರಸಾಪುರ ಗ್ರಾಮದ ಇಂದ್ರಮ್ಮ, ಹೊನ್ನಮ್ಮಪ್ಪ ಗ್ರಾಮದ ಶಂಕರನಾರಾಯಣ ಶಾಸ್ತ್ರಿ, ಸೂರ್ಯಪ್ರಕಾಶ್ ಮತ್ತು ಕಲ್ಯಾಣದುರ್ಗದ ಶ್ರೀಧರ್ ಅವರನ್ನು ಕೂಡಲೇ ಬಂಧಿಸಿ ವಿಚಾರಣೆಗೆ ಒಳಪಡಿಸಬೇಕು ಎಂದು ಆಗ್ರಹಿಸಿದರು. ಈ ಪ್ರಕರಣದಲ್ಲಿ ವಾದಿಗಳಾಗಿ ನಳೆನಾ ಕೋಲ ಜಯರಾಮಪ್ಪ, ವಿರುಪಸಮುದ್ರ ಗ್ರಾಮ, ಪಾವಗಡ ಅವರು ಇದ್ದಾರೆ. ಸರ್ಕಾರಿ ಭೂಮಿ ಒತ್ತುವರಿ ಮತ್ತು ಅಕ್ರಮ ಮಾರಾಟಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ನ್ಯಾಯಾಲಯದ ಈ ಆದೇಶ ಮಹತ್ವದ್ದಾಗಿದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ.

ಉಪಾಹಾರ ಸೇವಿಸಿದ 12 ಹಾಸ್ಟೆಲ್ ವಿದ್ಯಾರ್ಥಿಗಳು ಅಸ್ವಸ್ಥ

ತುಮಕೂರು: ಉಪಾಹಾರ ಸೇವಿಸಿದ ಬಳಿಕ 12 ವಿದ್ಯಾರ್ಥಿಗಳು ಅಸ್ವಸ್ಥಗೊಂಡ ಘಟನೆ ತುಮಕೂರು ಜಿಲ್ಲೆಯ ತುರುವೇಕೆರೆ ತಾಲೂಕಿನ ಮಣಿಚಂದೂರಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ನಡೆದಿದೆ. 6 ಮತ್ತು 7ನೇ ತರಗತಿಯ ವಿದ್ಯಾರ್ಥಿಗಳಿಗೆ ವಿಕಾಸಕ ಅಸ್ವಸ್ಥತೆ ಕಾಣಿಸಿಕೊಂಡಿದ್ದು, ತಕ್ಷಣ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ.

ವಿದ್ಯಾರ್ಥಿಗಳು ಉಪಾಹಾರ ಸೇವಿಸಿದ ಬಳಿಕ ಆರೋಗ್ಯದಲ್ಲಿ ಏರುಪೇರು ಕಂಡುಬಂದ ಹಿನ್ನೆಲೆಯಲ್ಲಿ ಶಾಲೆಯ ಶಿಕ್ಷಕರು ಕೂಡಲೇ ಅವರನ್ನು ಮಾಯಸಂದ್ರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದಿದ್ದಾರೆ. ಅಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿದ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ತುರುವೇಕೆರೆ ಸಾರ್ವಜನಿಕ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ.

ಚಿಕಿತ್ಸೆ ಪಡೆದ 12 ವಿದ್ಯಾರ್ಥಿಗಳ ಪೈಕಿ 9 ಮಂದಿ ಚೇತರಿಸಿಕೊಂಡಿದ್ದಾರೆ. ಆದರೆ ಉಳಿದ ಮೂವರು ವಿದ್ಯಾರ್ಥಿಗಳಿಗೆ ಸುಸ್ತು ಮುಂದುವರಿದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ವೈದ್ಯರ ಸೂಚನೆಯಂತೆ ಆಬುಲೆನ್ಸ್ ಮೂಲಕ ಅಮಿನಗಡ್ಡಿಯಲ್ಲಿರುವ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಗಿದೆ.

ಘಟನೆ ಹಿನ್ನೆಲೆಯಲ್ಲಿ ಅಧಿಕಾರಿಗಳು ವಿದ್ಯಾರ್ಥಿಗಳಿಗೆ ಸೇವಿಸಿದ ಆಹಾರ ಮತ್ತು ಕುಡಿಯಲ ನೀರಿನ ಮಾದರಿಗಳನ್ನು ಸಂಗ್ರಹಿಸಿದ್ದಾರೆ. ಅವುಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಲಾಗಿದ್ದು, ವಿದ್ಯಾರ್ಥಿಗಳು ಅಸ್ವಸ್ಥರಾಗಲು ಕಾರಣವೇನು ಎಂಬುದು ತನಿಖೆ ವರದಿ ಬಂದ ಬಳಿಕ ಸ್ಪಷ್ಟವಾಗಲಿದೆ. ಇತ್ತ ವಸತಿ ಶಾಲೆಯಲ್ಲಿರುವ ಇತರ ಮಕ್ಕಳ ಆರೋಗ್ಯದ ಮೇಲೂ ನಿಗಾ ವಹಿಸಿದ್ದಾರೆ. ಸ್ಪೆಷಲ್ ನರ್ಸ್‌ಗಳು ಮಕ್ಕಳ ಆರೋಗ್ಯ ಸ್ಥಿತಿಯನ್ನು ನಿರಂತರವಾಗಿ ಗಮನಿಸುತ್ತಿದ್ದಾರೆ.

ವಿದ್ಯಾರ್ಥಿಗಳ ಆರೋಗ್ಯದ ಮಾಹಿತಿ ತಿಳಿಯುತ್ತಿದ್ದಂತೆ ತಹಸೀಲ್ದಾರ್ ಎಸ್.ಎ. ಕುಜಾ ಅಹಮದ್ ಆಸ್ಪತ್ರೆಗೆ ಹಾಗೂ ಘಟನೆ ನಡೆದ ವಸತಿ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಶೇಖರ್ ಕೂಡ ಆಸ್ಪತ್ರೆಗೆ ತೆರಳಿ ಮಕ್ಕಳ ಆರೋಗ್ಯ ಸ್ಥಿತಿಯ ಬಗ್ಗೆ ಮಾಹಿತಿ ಪಡೆದರು. ಸಮಾಜ ಕಲ್ಯಾಣಾಧಿಕಾರಿ ರಮೇಶ್ ನಾಯಕ್ ಅವರು ವಸತಿ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸದ್ಯ ಅಸ್ವಸ್ಥಗೊಂಡಿದ್ದ ವಿದ್ಯಾರ್ಥಿಗಳಲ್ಲಿ ಬಹುತೇಕರು ಚೇತರಿಸಿಕೊಂಡಿರುವುದಾಗಿ ವೈದ್ಯರು ನಿಟ್ಟುಸಿರು ಬಿಟ್ಟಿದ್ದಾರೆ. ಮೂವರು ವಿದ್ಯಾರ್ಥಿಗಳ ಆರೋಗ್ಯದ ಮೇಲೆ ವೈದ್ಯರು ನಿಗಾ ವಹಿಸಿದ್ದು, ಆಹಾರ ಮತ್ತು ನೀರಿನ ಮಾದರಿಗಳ ಪ್ರಯೋಗಾಲಯ ವರದಿ ಬಳಿಕ ಅಸ್ವಸ್ಥತೆಗೆ ನಿಖರ ಕಾರಣ ತಿಳಿಯಲಿದೆ.

ಸಂಪರ್ಕ ಕೊಂಡಿ ಕಳಚಿ ಬೇರ್ಪಟ್ಟ ಬೋಗಿಗಳು; ರೈಲು ಸಂಚಾರದಲ್ಲಿ ವ್ಯತ್ಯಯ

ಸೂರ್ಯಪ್ರಗತಿನ್ಯೂಸ್.ಕಾಂ

ತಿಪಟೂರು: ಅರಸೀಕೆರೆ ರೈಲು ನಿಲ್ದಾಣದಿಂದ ಬೆಂಗಳೂರಿಗೆ ದಾಸ್ತಾನು ತುಂಬಿಕೊಂಡು ಹೊರಟ್ಟಿದ್ದ ಗೂಡ್ಸ್ ರೈಲಿನ ಬೋಗಿಗಳ ನಡುವಿನ ಸಂಪರ್ಕ ಕೊಂಡಿ (ಕಪ್ಲಿಂಗ್) ಕಳಚಿದ ಪರಿಣಾಮ ಬೋಗಿಗಳು ಬೇರ್ಪಟ್ಟ ಘಟನೆ ಮಂಗಳವಾರ ಇಲ್ಲಿನ ಹೊನ್ನವಳ್ಳಿ ರೋಡ್ ನಿಲ್ದಾಣ ಹಾಗೂ ತಿಪಟೂರು ರೈಲು ನಿಲ್ದಾಣಗಳ ಮಧ್ಯೆ ನಡೆದಿದೆ.

ಸಂಪರ್ಕ ಕೊಂಡಿ ಬಿಟ್ಟುಕೊಂಡ ಪರಿಣಾಮ 58 ಬೋಗಿಗಳ ಪೈಕಿ ಅರ್ಧದಷ್ಟು ಬೋಗಿಗಳು ಬೇರೆಯಾಗಿ ತಿಪಟೂರು ರೈಲು ನಿಲ್ದಾಣದಲ್ಲಿ ನಿಂತರೆ; ಉಳಿದವು ಮಾರ್ಗ ಮಧ್ಯದಲ್ಲೇ ನಿಂತವು. ಇದರಿಂದ ರೈಲು ಸಂಚಾರದಲ್ಲಿ ವ್ಯತ್ಯಯ ಉಂಟಾಗಿ, ಹಲವು ರೈಲುಗಳು ತಡವಾಗಿ ಸಂಚರಿಸಿದವು.

ಗೂಡ್ಸ್ ರೈಲು ಅಡಚಣೆಯಿಂದ ತಾಳಗುಪ್ಪ-ಬೆಂಗಳೂರು ರೈಲು (ರೈಲು ಸಂಖ್ಯೆ 20652) ಸುಮಾರು 1.30 ಗಂಟೆ, ವಾಸ್ಕೋಡಿಗಾಮಾ-ಯಶವಂತಪುರ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 17310) ಸುಮಾರು 1 ಗಂಟೆ ಹಾಗೂ ಚಿಕ್ಕಮಗಳೂರು-ಯಶವಂತಪುರ ಪ್ಯಾಸೆಂಜರ್ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 16239) ಸುಮಾರು 40 ನಿಮಿಷ ತಡವಾಗಿ ಸಂಚರಿಸಿದವು.

ವಿಷಯ ತಿಳಿದ ತಕ್ಷಣ ಅರಸೀಕೆರೆಯ ತಾಂತ್ರಿಕ ವಿಭಾಗದ ಅಧಿಕಾರಿಗಳು ಸ್ಥಳಕ್ಕೆ ತೆರಳಿ, ಮತ್ತೊಂದು ರೈಲು ಎಂಜಿನ್ ಅಳವಡಿಸಿ ಮಾರ್ಗ ಮಧ್ಯದಲ್ಲಿ ನಿಂತಿದ್ದ ಗೂಡ್ಸ್ ರೈಲಿನ ಭಾಗವನ್ನು ಹೊನ್ನವಳ್ಳಿ ರೋಡ್ ರೈಲು ನಿಲ್ದಾಣದತ್ತ ಕರೆತಂದರು. ನಂತರ ತಿಪಟೂರು ರೈಲು ನಿಲ್ದಾಣದಲ್ಲಿ ನಿಂತಿದ್ದ ಗೂಡ್ಸ್ ರೈಲಿನ ಭಾಗಕ್ಕೆ ಬೇರ್ಪಟ್ಟ ಬೋಗಿಗಳನ್ನು ಸಂಪರ್ಕ ಕೊಂಡಿಯ ಮೂಲಕ ಜೋಡಿಸಿ ಪುನರಾರಂಭಿಸಲಾಯಿತು.

ಘಟನೆಯಿಂದ ಕೆಲಕಾಲ ರೈಲು ಸಂಚಾರದಲ್ಲಿ ವ್ಯತ್ಯಯ ಉಂಟಾದರೂ, ರೈಲ್ವೆ ಸಿಬ್ಬಂದಿಯ ತ್ವರಿತ ಕಾರ್ಯಾಚರಣೆಯಿಂದ ಪರಿಸ್ಥಿತಿ ಬೇಗ ನಿಯಂತ್ರಣಕ್ಕೆ ಬಂದಿತು ಎಂದು ರೈಲ್ವೆ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಇಂದು ವಿದ್ಯುತ್ ವ್ಯತ್ಯಯ

ತುಮಕೂರು ಬೆಸ್ಕಾಂ ತಿಪಟೂರು ನಗರ ಉಪವಿಭಾಗ ವ್ಯಾಪ್ತಿಯಲ್ಲಿ ದುರ್ಸ್ತು ಕಾಮಗಾರಿ ಕೈಗೊಂಡಿರುವುದರಿಂದ ಆಗಸ್ಟ್ 19ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಮೇಕರಹಳ್ಳಿ, ಎಸ್‌ಕೆಪಿ ಆಯಿಲ್ ಮಿಲ್, ವಿದ್ಯಾನಗರ, ಬಾಲಾಜಿ ನಗರ, ಜಾಜಿಕಟ್ಟೆ, ಸಂತೆಹೊಚೆ, ಶಿವಾಜಿನಗರ ಹಾಗೂ ಯಲಿಯೂರು ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳು ಮತ್ತು ಶಿರಾ ಸುತ್ತಮುತ್ತ